# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 76 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–09–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 76 | Title- Code: KARKAN 28269 | Chitradurga | Date: 23-09-2023 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಾರ್ವಜನಿಕರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸಿ ಪ್ರಾಮಾಣಿಕ ಸೇವೆ ಸಲ್ಲಿಸಿ: ಲಕ್ಷ್ಮಣ್ 2

ರಾಜ್ಯದ ವಿದ್ಯುತ್ ಉತ್ಪಾದನೆ ಸ್ಥಾಪಿತ ಸಾಮರ್ಥ್ಯಕ್ಕಿಂತ ಕುಸಿದಿರುವುದು ಏಕೆ: ಸಿಎಂ 3

ಸರ್ಕಾರಿ ಆಸ್ಪತ್ರೆ ಪಾತ್ರ ಮಹತ್ವ: ನ್ಯಾ.ವಿಜಯ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಹಿಳಾ ಮೀಸಲಾತಿಯಿಂದ ನವ ಭಾರತದ ಹೊಸ ಶಕ್ತಿ: ಪ್ರಧಾನಿ ಮೋದಿ



ನವದೆಹಲಿ: ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಸ್ಥಾನಗಳನ್ನು ಒದಗಿಸುವ ಮಹಿಳಾ ಮೀಸಲು ಮಸೂದೆ ಉಭಯ ಸದನಗಳಲ್ಲಿ ಅಂಗೀಕಾರವಾದ ಬೆನ್ನಲೇ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಎಲ್ಲಾ ಮಹಿಳೆಯರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಸಂಸತ್ತಿನಲ್ಲಿ ಮಹಿಳಾ ಮೀಸಲು ಮಸೂದೆ ಅಂಗೀಕಾರವಾದ ಹಿನ್ನೆಲೆಯಲ್ಲಿ ಶುಕ್ರವಾರ ದೆಹಲಿಯ ದೀನ್ ದಯಾಳ್ ಉಪಾಧ್ಯಾಯ ಮಾರ್ಗದಲ್ಲಿರುವ ಬಿಜೆಪಿ ಕಚೇರಿಯಲ್ಲಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ದೇಶದ ಎಲ್ಲಾ ಹೆಣ್ಣುಮಕ್ಕಳನ್ನು ಅಭಿನಂದಿಸುತ್ತೇನೆ. ಸೆಪ್ಟೆಂಬರ್ 21 ಮತ್ತು 22ರಂದು ಹೊಸ ಇತಿಹಾಸವನ್ನು ರಚಿಸಿದ್ದೇವೆ. ಮಹಿಳಾ ಮೀಸಲಾತಿ ಮಸೂದೆ ಸಾಮಾನ್ಯ ಕಾನೂನಲ್ಲ, ಇದು ನವ ಭಾರತದ ಹೊಸ ಶಕ್ತಿ ಎಂದು ಮೋದಿ ಹೇಳಿದರು. ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪ್ರಧಾನಿ ಮೋದಿಯವರಿಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ ಪಿ ನಡ್ಡಾ ಸೇರಿದಂತೆ ಮಹಿಳಾ ಸಂಸದರು ಅದ್ದೂರಿ ಸ್ವಾಗತ ಕೋರಿದರು. ಕಾರ್ಯಕ್ರಮದಲ್ಲಿ ಅಮಿತ್ ಶಾ ಸೇರಿದಂತೆ ಹಿರಿಯ ಮುಖಂಡರು, ಕೇಂದ್ರ ಸಚಿವರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

### ಪಾವಗಡ ರಸ್ತೆಯಲ್ಲಿ ವಿದ್ಯುತ್ ಕಂಬಕ್ಕೆ ಲಾರಿ ಡಿಕ್ಕಿ: ತಪ್ಪಿದ ಅನಾಹುತ



ಚಳ್ಳಕೆರೆ: ನಗರದ ಪಾವಗಡ ರಸ್ತೆಯ ಮಾರುತಿ ಫರ್ನಿಚರ್ ಮುಂಭಾಗದಲ್ಲಿ ರಸ್ತೆ ಬದಿ ಇದ್ದ ವಿದ್ಯುತ್ ಕಂಬಕ್ಕೆ ಯಾವುದೋ ಲಾರಿ ರಭಸವಾಗಿ ಆಗಮಿಸಿ ಡಿಕ್ಕಿ ಹೊಡೆದ ಪರಿಣಾಮವಾಗಿ ವಿದ್ಯುತ್ ಕಂಬ ಮೂರುತುಂಡಾಗಿದ್ದು, ಕಂಬ ವೈರ್‌ಗಳು ಮೇಲ್ಭಾಗದಲ್ಲೇ ಜೋತುಬಿದ್ದ ಪರಿಣಾಮ ಯಾವುದೇ ಪ್ರಾಣಾಪಾಯವಾಗಿಲ್ಲ.

ಶುಕ್ರವಾರ ಬೆಳಗಿನ ಜಾವ ನೆಹರೂ ವೃತ್ತದಿಂದ ಪಾವಗಡ ಕಡೆಗೆ ಹೋರಟ ಲಾರಿ ವೇಗವಾಗಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ಕೂಡಲೇ ಚಾಲಕ ಲಾರಿಯನ್ನು ಬಿಟ್ಟು ಪರಾರಿಯಾಗಿದ್ದಾನೆ. ವಿದ್ಯುತ್ ಕಂಬದಲ್ಲಿ ಸಂಪರ್ಕದ ವೈರ್‌ಗಳು ತುಂಡಾಗದೆ ಜೋತಾಡುತ್ತಿದ್ದು, ರಾತ್ರಿ ವೇಳೆಯಾದ್ದರಿಂದ ಯಾವುದೇ ಪ್ರಾಣಾಪಾಯವಾಗಿಲ್ಲ. ವಿಶೇಷವೆಂದರೆ ಈ ರಸ್ತೆ ಸದಾ ಜನಜಂಗುಳಿ, ವಾಹನಗಳ ಸಂಚಾರದಿಂದ ಕೂಡಿರುತ್ತಿದ್ದು, ಹಗಲು ಈ ಘಟನೆ ಸಂಭವಿಸಿದ್ದರೆ ಹೆಚ್ಚಿನ ಅಪಾಯವಾಗುತ್ತಿತ್ತು ಎಂಬುವುದು ಸಾರ್ವಜನಿಕ ಅಭಿಪ್ರಾಯವಾಗಿದೆ. ಸುದ್ದಿ ತಿಳಿದ ಕೂಡಲೇ ಬೆಸ್ಕಾಂ ಅಧಿಕಾರಿಗಳು ಸ್ಥಳಕ್ಕೆ ದಾವಿಸಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಯಾವುದೇ ಅನಾಹುತವಾಗದಂತೆ ತಡೆದಿದ್ದಾರೆ.

### ಐತಿಹಾಸಿಕ ಕಾರ್ಯಕ್ರಮಕ್ಕೆ ಸಜ್ಜಾಗುತ್ತಿದೆ ಚಿತ್ರದುರ್ಗ

# ಕೋಟೆ ನಾಡಲ್ಲಿ ಮದಕರಿ ಉತ್ಸವ

» **ಚಿತ್ರದುರ್ಗ**

ಕೋಟೆ ನಾಡು ಚಿತ್ರದರ್ಗದಲ್ಲಿ ದುರ್ಗವನ್ನು ಆಳ್ವಿಕೆ ಮಾಡಿ ರಾಜವೀರ ಮದಕರಿನಾಯಕ ಜಯಂತ್ಯೋತ್ಸವವನ್ನು ಅದ್ದೂರಿಯಾಗಿ ಸಂಭ್ರಮ ಸಡಗರದೊಂದಿಗೆ ಆಚರಣೆ ಮಾಡಲು ನಿರ್ಧಾರ ಮಾಡಲಾಗಿದೆ ಎಂದು ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್ ಹೇಳಿದರು.


ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಚಿತ್ರದುರ್ಗ ನಾಯಕ ಸಮುದಾಯದ ಶಕ್ತಿ ಕೇಂದ್ರವಾಗಿದೆ. ಮದಕರಿನಾಯಕ ಉತ್ತಮ ಆಡಳಿತ ನಡೆಸಿ ಈ ನಾಡಿನ ಜನರ ಹಿತ ಕಾಯುವ ಕೆಲಸವನ್ನು ಮಾಡಿದ್ದಾರೆ. ನಾವೆಲ್ಲರೂ ಜಾತ್ಯತೀತವಾಗಿ ಸೇರಿ ಮದಕರಿ ಜಯಂತ್ಯೋತ್ಸವವನ್ನು ಆಚರಣೆ ಮಾಡಲಾಗುತ್ತದೆ ಎಂದರು. ಪ್ರತಿ ವರ್ಷ ನಾಯಕ ಸಮುದಾಯದಿಂದ ಮದಕರಿನಾಯಕನ ಸ್ಮರಣೆಯನ್ನು ವರ್ಷಕ್ಕೆ ಎರಡು ಬಾರಿ ಮಾಡಲಾಗುತ್ತದೆ. ಮೇ 15 ರಂದು ಮದಕರಿನಾಯಕ ಸ್ಮರಣೆ ಮತ್ತು ಅಕ್ಟೋಬರ್ 13 ರಂದು ಮದಕರಿನಾಯಕನ ಉತ್ಸವ ಮಾಡಲಾಗುತ್ತದೆ. ಎರಡ್ಮೂರು ದಿನದಲ್ಲಿ ಮದಕರಿನಾಯಕ ನೂತನ ಭಾವಚಿತ್ರ ಬಿಡುಗಡೆಗೊಳಿಸಲಾಗುತ್ತದೆ. ಯುವ ಸಮೂಹದಂತೆ ನಾವು ಹೆಜ್ಜೆ ಹಾಕಬೇಕು ಆ ನಿಟ್ಟಿನಲ್ಲಿ ಬೃಹತ್ ಎರಡರಿಂದ ಮೂರು ಡಿಜೆ ಗಳೊಂದಿಗೆ ಮೆರವಣಿಗೆ ನಡೆಯುತ್ತದೆ. ವಾಲ್ಮೀಕಿ ಜಯಂತಿಗಿಂತ ಎರಡು ಪಟ್ಟು ಹೆಚ್ಚಿನ ಜನರನ್ನು ಸೇರಿಸಿ ಐತಿಹಾಸಿಕ ಪುಟ ಸೇರುವಂತೆ ಈ ಕಾರ್ಯಕ್ರಮ ಮಾಡುತ್ತೇವೆ ಎಂದರು.

ಈ ನಾಡ ದೊರೆ ಮದರಿಕನಾಯಕರು ಸಾವಿರಾರು ಜನಪರ ಕೆಲಸಗಳನ್ನು ಮಾಡಿದ್ದಾರೆ. ಕೆರೆ ಕಟ್ಟೆಗಳು ನಿರ್ಮಿಸಿ ಜನ ಕಷ್ಟಗಳನ್ನು ನೀಗಿಸಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಾದ್ಯಂತ ದೊಡ್ಡ ಮಟ್ಟದಲ್ಲಿ ಮದಕರಿ ಉತ್ಸವ ಮಾಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಅಧ್ಯಕ್ಷ ಹೆಚ್.ಜೆ. ಕೃಷ್ಣಮೂರ್ತಿ ಮಾತನಾಡಿ ಕಾರ್ಯಕ್ರಮದ ಪೂರ್ಣ ವಿವರವನ್ನು ಒಂದೆರಡು ದಿನದಲ್ಲಿ ತಿಳಿಸುತ್ತೇನೆ. ಮದಕರಿನಾಯಕ ಜಯಂತಿಗೆ ಯಾರು ರಾಜ್ಯದಿಂದ ಆಗಮಿಸುತ್ತಾರೆ ಎಂಬುದನ್ನು ತಿಳಿಸುತ್ತೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ದೀಪಕ್, ಕಾಟೀಹಳ್ಳಿ ಕರಿಯಪ್ಪ, ಗೋಪಲಸ್ವಾಮಿ ನಾಯಕ, ಸೋಮೇಂದ್ರ ಇದ್ದರು.






ಎಂ.ಎಸ್. ಐ.ಎಲ್ ವತಿಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾದ 2 ಕೋಟಿ ರೂ. ಚೆಕ್ಕನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧದಲ್ಲಿ ಸ್ವೀಕರಿಸಿದರು. ಸಚಿವರಾದ ಎಂ.ಬಿ. ಪಾಟೀಲ್, ವ್ಯವಸ್ಥಾಪಕ ನಿರ್ದೇಶಕ ಮನೋಜ ಕುಮಾರ್, ಸೆಲ್ವಕುಮಾರ್ ಉಪಸ್ಥಿತರಿದ್ದರು.

## ಈ ಬಾರಿ ಸರಳ ದಸರಾ



» **ಬೆಂಗಳೂರು**

ವಿಶ್ವವಿಖ್ಯಾತ ಮೈಸೂರು ದಸರಾದ ಅದ್ದೂರಿ ಆಚರಣೆಗೆ ತಡೆ ಬಿದ್ದಿದ್ದು, ಈ ಬಾರಿಯ ಸರಳ ದಸರಾವಾಗಲಿದೆ.ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವುದರಿಂದ ಮೈಸೂರು ದಸರಾವನ್ನು ಸರಳ ಹಾಗೂ ಸಂಪ್ರದಾಯಬದ್ಧವಾಗಿ ಆಚರಿಸಲು ರಾಜ್ಯಸರ್ಕಾರ ನಿರ್ಧರಿಸಿದೆ.ಈ ಬಾರಿಯ ದಸರಾವನ್ನು ಅದ್ದೂರಿಯಾಗಿ ಆಚರಿಸಲು ಈ ಹಿಂದೆ ತೀರ್ಮಾನ ಕೈಗೊಳ್ಳಲಾಗಿತ್ತು. ರಾಜ್ಯದಲ್ಲಿ ಬರ ಆವರಿಸಿರುವುದರಿಂದ ಅದ್ದೂರಿ ದಸರಾ ಬೇಡ, ಸರಳ ದಸರಾ ಆಚರಿಸೋಣ ಎಂಬ ತೀರ್ಮಾನಕ್ಕೆ ಸರ್ಕಾರ ಬಂದಿದೆ.


ಪುಟ ↘ 3


**ಪ್ರಮುಖ ಸುದ್ದಿ**

# ಶಿಕ್ಷಣ ಇಲಾಖೆ ಕಾರ್ಯಕ್ರಮಗಳು ಸುಗಮವಾಗಿ ಸಾಗುತ್ತಿವೆ: ಸಚಿವ

» **ಚಳ್ಳಕೆರೆ**

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವ ವಹಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಡಳಿತದಲ್ಲಿ ರಾಜ್ಯದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಶಿಕ್ಷಣವೂ ಸೇರಿದಂತೆ ಎಲ್ಲಾ ಇಲಾಖೆಯ ಕಾರ್ಯಕ್ರಮಗಳು ಸುಗಮವಾಗಿ ನಡೆಯುತ್ತಿವೆ ಎಂದು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಣ ಸಚಿವ ಮಧುಬಂಗಾರಪ್ಪ ತಿಳಿಸಿದರು.

ಚಿತ್ರದುರ್ಗದಿಂದ ರಾಯಚೂರಿಗೆ ತೆರಳುವ ಮಾರ್ಗಮಧ್ಯದಲ್ಲಿಚಳ್ಳಕೆರೆತಾಲ್ಲೂಕಿನದುಗ್ಗಾವರ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರು, ಈಡಿಗ ಸಮುದಾಯದ ನಾಯಕ ಆರ್.ದೊಡ್ಡರಂಗಪ್ಪ ಮತ್ತು ಕೆಪಿಸಿಸಿ ರಾಜ್ಯ ಹಿಂದುಳಿದ ವರ್ಗಗಳ ಉಪಾಧ್ಯಕ್ಷೆ ನಾಗವೇಣಮ್ಮ ಇವರ ನಿವಾಸಕ್ಕೆ ಭೇಟಿ ನೀಡಿ ವಿಶ್ರಾಂತಿ ಪಡೆದು ರಾಯಚೂರಿಗೆ ತೆರಳಿದರು. ಪತ್ರಿಕೆಯೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಈಗಾಗಲೇ ಜನತೆಗೆ ನೀಡಿದ ಗ್ಯಾರಂಟಿಗಳನ್ನು ಈಡೇರಿಸುವಲ್ಲಿ ಉತ್ತಮ ಸಾಧನೆ ಮಾಡಿದೆ. ಒಂದು ಗ್ಯಾರಂಟಿ ಬಿಟ್ಟು ಉಳಿದ ನಾಲ್ಕೂ ಗ್ಯಾರಂಟಿಗಳು ಈಗಾಗಲೇ ಚಾಲ್ತಿಯಲ್ಲಿವೆ. ಸರ್ಕಾರದ ಅಭಿವೃದ್ಧಿ ಕಾಮಗಾರಿಗಳಿಗೆ ಹಣ ನೀಡುತ್ತಿಲ್ಲವೆಂದು ವಿರೋಧ ಪಕ್ಷದವರು ಆರೋಪಿಸುತ್ತಿದ್ದಾರೆ. ಆದರೆ, ಮುಖ್ಯಮಂತ್ರಿಗಳು ರಾಜ್ಯದ ಅಭಿವೃದ್ಧಿಗೆ ಅವಶ್ಯವಿರುವ ಹಣವನ್ನು ಬಿಡುಗಡೆ ಮಾಡುವ ಭರವಸೆ ನೀಡಿದ್ದಾರೆ. ಶಾಸಕರಿಗೆ ನೀಡುವ ಅನುದಾನವೂ ಸಹ ಹೆಚ್ಚಿಸಲು ಚಿಂತನೆ ನಡೆದಿದೆ. ನಮ್ಮ ಸರ್ಕಾರದ ಆಡಳಿತದಲ್ಲಿ ಮಹಿಳೆಯರಿಗೆ ಹೆಚ್ಚಿನ ರೀತಿಯ ಸೌಲಭ್ಯವನ್ನು ನೀಡಲಾಗಿದೆ. ಕೆಲವೊಂದು ಬದಲಾವಣೆಗಳ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆ ಕೆಲವು ಯೋಜನೆಗಳನ್ನು ಸ್ಥಗಿತಗೊಳಿಸಿದೆ. ವಿದ್ಯಾಸಿರಿಗೆ ಬದಲಾಗಿ ಬೇರೆ ರೀತಿಯಲ್ಲಿ ವಿದ್ಯಾರ್ಥಿಗಳಿಗೆ ನೆರವು ನೀಡಲು ಸರ್ಕಾರ ಸಿದ್ದವಿದೆ ಎಂದರು.



## ಚಳ್ಳಕೆರೆ ಲಾರಿ ಮಾಲೀಕರ ಕ್ಷೇಮಾಭಿವೃದ್ಧಿ ಸಂಘ ಅಸ್ಥಿತ್ವಕ್ಕೆ ಜನರ ವಿಶ್ವಾಸ ಗಳಿಸಿ ಮುನ್ನಡೆಯಿರಿ: ಶಾಸಕ



**ಚಳ್ಳಕೆರೆ:** ಕಳೆದ ಹಲವಾರು ವರ್ಷಗಳಿಂದ ಸಾರ್ವಜನಿಕರು ಹಾಗೂ ವರ್ತಕರ ಸರಕುಗಳನ್ನು ಸಾಗಾಟ ಮಾಡುವ ಮೂಲಕ ಚಳ್ಳಕೆರೆ ಲಾರಿ ಮಾಲೀಕರ ಸಂಘ ಉತ್ತಮ ಬಾಂಧವ್ಯವನ್ನು ಹೊಂದಿದೆ. ಇದೇ ಮೊದಲ ಭಾರಿಗೆ ಲಾರಿಮಾಲೀಕರ ಕ್ಷೇಮಾಭಿವೃದ್ಧಿ ಸಂಘದ ಮೂಲಕ ಎಲ್ಲಾ ಲಾರಿ ಮಾಲೀಕರು ಸಂಘಟಿತರಾಗಿ ಸಂಘದ ಬೆಳವಣಿಗೆಗೆ ಸಹಕರಿಸಬೇಕೆಂದು ಶಾಸಕ ಟಿ.ರಘುಮೂರ್ತಿ ಕಿವಿಮಾತು ಹೇಳಿದರು. ಅವರು, ಶುಕ್ರವಾರ ಬೆಂಗಳೂರು ರಸ್ತೆಯಲ್ಲಿ ನೂತನವಾಗಿ ಚಳ್ಳಕೆರೆ ಲಾರಿ ಮಾಲೀಕರ ಕ್ಷೇಮಾಭಿವೃದ್ಧಿ ಸಂಘವನ್ನು ಉದ್ಘಾಟಿಸಿ ಮಾತನಾಡಿದರು. ಚಳ್ಳಕೆರೆ ನಗರವೂ ಸೇರಿದಂತೆ ರಾಜ್ಯ ಹಾಗೂ ಅಂತರಾಜ್ಯಕ್ಕೆ ಸರಕು ಸಾಮಾಗ್ರಿಗಳನ್ನು ಪ್ರಾಮಾಣಿಕತೆಯಿಂದ ಸಾಗಾಟ ಮಾಡಿ ವರ್ತಕರ ವಿಶ್ವಾಸವನ್ನುಗಳಿಸಿದ್ದೀರಿ, ನಿಮ್ಮ ಎಲ್ಲಾ ಚಟುವಟಿಕೆಗಳಿಗೆ ನಾನು ಸದಾ ಬೆಂಬಲವಾಗಿರುತ್ತೇನೆಂದರು.

## ಫಾಸ್ಟ್ ನ್ಯೂಸ್

### ಸೆ.23ರಂದು ಚಿತ್ರದುರ್ಗ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ

» **ಚಿತ್ರದುರ್ಗ**

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಚಿತ್ರದುರ್ಗ ತಾಲ್ಲೂಕುಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಉದ್ಘಾಟನಾ ಸಮಾರಂಭವನ್ನು ಸೆಪ್ಟೆಂಬರ್ 23ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಸಂತ ಜೋಸೆಫರ ಕಾನ್ವೆಂಟ್‌ನಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಡಾ.ಎಂ.ಚಂದ್ರಪ್ಪ, ಟಿ.ರಘುಮೂರ್ತಿ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಡಯಟ್ ಪ್ರಾಂಶುಪಾಲ ಎಂ.ನಾಸೀರ್ ಉದ್ದೀನ್ ಭಾಗವಹಿಸುವರು.

### 27 ರವರೆಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ

» **ಚಿತ್ರದುರ್ಗ**

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಇದೇ ಸೆಪ್ಟೆಂಬರ್ 25 ರಿಂದ 27 ರವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳಿಗೆ ಖುದ್ದಾಗಿ ಭೇಟಿ ನೀಡಿ, ಸಾರ್ವಜನಿಕರಿಂದ ದೂರು, ಅಹವಾಲು ಸ್ವೀಕರಿಸುವರು.

**ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ವಿವರ:** ಇದೇ ಸೆಪ್ಟೆಂಬರ್ 25ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಹಿರಿಯೂರು ಹಾಗೂ ಮೊಳಕಾಲ್ಮುರು ತಾಲ್ಲೂಕು ಕಚೇರಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಹಾಜರಿರುವರು. ಸೆ.26ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಚಳ್ಳಕೆರೆ ಹಾಗೂ ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ ಹಾಜರಿರುವರು. ಸೆ.27ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಹಾಜರಿದ್ದು, ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು. ಸಾರ್ವಜನಿಕರು "ಸರ್ಕಾರಿ ಕಚೇರಿಗಳಲ್ಲಿ ತಮ್ಮ ಕೆಲಸಗಳನ್ನು ಮಾಡಿಕೊಡಲು ಅಲ್ಲಿನ ಅಧಿಕಾರಿ, ಸಿಬ್ಬಂದಿಗಳು ಲಂಚದ ಹಣಕ್ಕಾಗಿ ಬೇಡಿಕೆ ಯಿಟ್ಟಲ್ಲಿ, ಸರ್ಕಾರವು ಸಾರ್ವಜನಿಕರಿಗಾಗಿ ರೂಪಿಸಲಾ ಗಿರುವ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸದೇ ಇರುವುದು ಮತ್ತು ಅಂತಹ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಸರ್ಕಾರಿ ಅಧಿಕಾರಿಗಳು ಅನಾವಶ್ಯಕ ವಿಳಂಬ ಮಾಡುತ್ತಿರುವುದು, ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷತನ ಮತ್ತು ತಾರತಮ್ಯ ತೋರುವುದು, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವುದು ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ" ದೂರುಗಳನ್ನು ನಿಗಧಿತ ನಮೂನೆ-1&2 ರಲ್ಲಿ ಸಲ್ಲಿಸಬಹುದು.

### ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2023-24ನೇ ಸಾಲಿಗೆ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ಬಿ.ಇಡಿ ಹಾಗೂ ಡಿ.ಇಡಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಅರ್ಜಿಗಳನ್ನು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕವನ್ನು ಸೆಪ್ಟೆಂಬರ್ 30ರವರೆಗೆ ವಿಸ್ತರಿಸಲಾಗಿದೆ. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೀಕ್ಷಾ ಭೂಮಿ ಭೇಟಿ

» **ಚಿತ್ರದುರ್ಗ**

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2023-24ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ದೀಕ್ಷಾ ಭೂಮಿಗೆ ಭೇಟಿ ನೀಡುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯಾತ್ರಾರ್ಥಿಗಳು ಸಮಾಜ ಇಲಾಖೆ ವೆಬ್‌ಸೈಟ್ https://sw.kar.nic.in ನಲ್ಲಿ ಆನ್‌ಲೈನ್ ಮೂಲಕ ಸೆಪ್ಟೆಂಬರ್ 20 ರಿಂದ ಅಕ್ಟೋಬರ್ 10 ರವರೆಗೆ ಅರ್ಜಿ ಸಲ್ಲಿಸಬಹುದು.

# ಬೆಳಗಾವಿಯಲ್ಲಿ ಕುರುಬರ ಸಮಾವೇಶ

» **ಚಿತ್ರದುರ್ಗ**




ಕುರಿಕಾಯುವವರ ಸಂಘಟನೆ ಮಾಡುವುದರ ಮೂಲಕ ಒಕ್ಕೂಟ ರಚನೆ ಮಾಡಲಾಗುತ್ತಿದೆ. ಇದರ ಅಂಗವಾಗಿ ಅ. 2 ಮತ್ತು 3 ಬೆಳಗಾವಿಯಲ್ಲಿ ಅಖಿಲ ಭಾರತ ಮಟ್ಟದ ಕುರುಬರ ಸಮಾವೇಶವನ್ನು ಹಮ್ಮಿಕೊಂಡಿದ್ದು ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಸನ್ಮಾನಿಸಲಾಗುವುದೆಂದು ಷಪಡ್ಸ್ ಇಂಡಿಯಾ ಇಂಟರ್ ನ್ಯಾಷನಲ್‌ನ ಕಾರ್ಯದರ್ಶಿ ಜಿ.ಎಸ್.ಕುಮಾರ್ ಗೌಡ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಇರುವ ಕುರಬರನ್ನು ಸಂಘಟಿಸುವ ಕಾರ್ಯ 2009ರಲ್ಲಿ ಹೆಚ್.ವಿಶ್ವನಾಥ್ ರವರ ನೇತೃತ್ವದಲ್ಲಿ ಸಂಘಟನೆ ಕಾರ್ಯ ನಡೆದಿದ್ದು ಮುಂದಿನ ಹಂತವಾಗಿ ಪ್ರಪಂಚದ್ಯಾಂತ್ಯ ಇರುವ ಕುರುಬರನ್ನು ಸಂಘಟಿಸುವ ಕಾರ್ಯವೂ ಸಹಾ ನಡೆಯುತ್ತಿದೆ. ಈಗಾಗಲೇ ವಿವಿಧ ದೇಶಗಳಲ್ಲಿ ಪ್ರವಾಸ ಮಾಡುವುದರ ಮೂಲಕ ಕುರುಬರನ್ನು ಸಂಘಟಿಸಲಾಗುತ್ತಿದೆ ಎಂದರು.

ಸಂಸ್ಥಾಪನಾ ಅಧ್ಯಕ್ಷರಾಗಿ ವಿಶ್ವನಾಥ್ ರವರನ್ನು ನೇಮಕ ಮಾಡಲಾಗಿದೆ. 2019ರಿಂದಲೇ ಪ್ರಪಂಚದ ವಿವಿಧ ದೇಶಗಳಲ್ಲಿ ಪ್ರವಾಸ ಮಾಡುವುದರ ' ಮೂಲಕ ಷಪಡ್ಸ್‌ರನ್ನು ಸಂಘಟಿಸಲಾಗುತ್ತಿದೆ. 2025ರಲ್ಲಿ ಕೆನಾಡದಲ್ಲಿ ಪ್ರಪಂಚದ ಷಪಡ್ಸ್ ಬೃಹತ್ ಸಮಾವೇಶವನ್ನು ಏರ್ಪಡಿಸಲಾಗಿದ್ದು, ಇದರಲ್ಲಿ ವಿವಿಧ ರಾಜಕೀಯ ವ್ಯಕ್ತಿಗಳು, ಅಧಿಕಾರಿಗಳು, ವರ್ತಕರು, ಚುನಾಯಿತ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಅ. 2 ಮತ್ತು 3 ರಂದು ಬೆಳಗಾವಿಯಲ್ಲಿ ಅಖಿಲ ಭಾರತ ಕುರುಬ ಸಮಾವೇಶವನ್ನು ಹಮ್ಮಿಕೊಂಡಿದ್ದು, ಇದರಲ್ಲಿ ಅ. 3 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರವರನ್ನು ಸನ್ಮಾನಿಸಲಾಗುವುದು ಇದರಲ್ಲಿ ಸುಮಾರು 5 ಲಕ್ಷ ಜನ ಸೇರುವ ನಿರೀಕ್ಷೆ ಇದೆ. ಇದರ ಅಧ್ಯಕ್ಷತೆಯನ್ನು ವಿಶ್ವನಾಥ್ ರವರು ವಹಿಸಲಿದ್ದಾರೆ. ಇದಕ್ಕೂ ಮುನ್ನಾ ದಾವಣಗೆರೆಯಲ್ಲಿ ಜನಾಂಗದ ಸಭೆಯನ್ನು ಸೆ. 25 ರಂದು ಹಮ್ಮಿಕೊಳ್ಳಲಾಗಿದ್ದು ಮಾಜಿ ಸಚಿವರಾದ ರೇವಣ್ಣರವರು ಭಾಗವಹಿಸಲಿದ್ದಾರೆ ಎಂದರು.

ಕುರುಬ ಜನಾಂಗವನ್ನು ಎಸ್.ಟಿ.ಗೆ ಸೇರಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದು ಇದರ ಕಡತ ಈಗ ಕೇಂದ್ರ ಸರ್ಕಾರದ ಮುಂದೆ ಇದೆ ಇದಕ್ಕೆ ಸಂಬಂದಪಟ್ಟಂತೆ ಪ್ರಧಾನ ಮಂತ್ರಿಗಳು ಇತ್ತೀಚೇಗೆ ಷಪಡ್ಸ್ ರವರ ಸಭೆಯನ್ನು ಕರೆಯುವುದರ ಮೂಲಕ ಅವರ ಜೊತೆ ಮಾತುಕಥೆಯನ್ನು ನಡೆಸಿದ್ದಾರೆ. ಈ ಸರ್ಕಾರದ ಮೇಲೆ ನಮಗೆ ನಂಬಿಕೆ ಇದೆ ನಮ್ಮ ಜನಾಂಗವನ್ನು ಎಸ್.ಟಿ.ಗೆ ಸೇರಿಸುತ್ತಾರೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ತಿಪ್ಪೇಸ್ವಾಮಿ, ಗಂಗಾಧರ್ ಗುರು, ನಗರಸಭೆಯ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ ಭಾಗವಹಿಸಿದ್ದರು.

### ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

# ಗರ್ಭಾವಸ್ಥೆಯಲ್ಲಿ ಮಹಿಳೆ ಆರೈಕೆ ಅತ್ಯಗತ್ಯ

» **ಚಿತ್ರದುರ್ಗ**



ಗರ್ಭಾವಸ್ಥೆಯಲ್ಲಿ ಮಹಿಳೆಯ ಆರೈಕೆ ಸರಿಯಾಗಿ ಮಾಡಿದರೆ ತಾಯಿ ಮರಣ ಶಿಶು ಮರಣ ತಡೆಗಟ್ಟಬಹುದು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದ ಎಸ್ ಸಿ ಕಾಲೋನಿ ಅಂಗನವಾಡಿ ಬಳಿ ಗರ್ಭಿಣಿ ಬಾಣಂತಿಯರ ಮನೆ ಮನೆ ಭೇಟಿ ಮಾಡಿ ದೇವಸ್ಥಾನದ ಆವರಣದಲ್ಲಿ ಶನಿವಾರ ಗುಂಪು ಸಭೆ ನಡೆಸಿ ಅವರು ಮಾತನಾಡಿದರು.

ಗರ್ಭಿಣಿಯರ ಆರೈಕೆ, ಬಾಣಂತಿಯರ ಆರೈಕೆ, ಮಕ್ಕಳ ಆರೈಕೆ ಸರಿಯಾಗಿ ಮಾಡಲು ಕುಟುಂಬದ ಸರ್ವ ಸದಸ್ಯರು ಸಹಕಾರ ನೀಡಬೇಕು ಎಂದು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಗರ್ಭಿಣಿಯರು ಪ್ರತಿ ತಿಂಗಳು 9ನೇ ತಾರೀಖಿನಂದು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಯುವ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಂಡು, ಉಚಿತ ಪ್ರಯೋಗಾಲಯ ಪರೀಕ್ಷೆಗಳು, ರಕ್ತದೊತ್ತಡ, ಸಿಹಿ ಮೂತ್ರ ಇತರೆ ಪರೀಕ್ಷೆಗಳನ್ನು ಮಾಡಿಸಿ, ವೈದ್ಯರು ನೀಡುವ ಸಲಹೆ ಸೂಚನೆ ಪಾಲಿಸಿ ಎಂದರು. ಪೌಷ್ಟಿಕಾಂಶಯುಕ್ತ ಆಹಾರಗಳನ್ನು ಸೇವನೆ ಮಾಡಿ. ಮನೆ ಹೆರಿಗೆ ಮಾಡಿಸದೆ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಿಕೊಳ್ಳಿ. ನಿಮಗೆ ಮತ್ತು ನಿಮ್ಮ ಮಕ್ಕಳಿಗೆ ಕಾಲಕಾಲಕ್ಕೆ ಮಾರಣಾಂತಿಕ ರೋಗಗಳ ವಿರುದ್ಧ ಲಸಿಕೆಯನ್ನು ಪಡೆದುಕೊಳ್ಳಿ. ಕಬ್ಬಿನಾಂಶದ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ತಪ್ಪದೇ ಸೇವಿಸಿ ರಕ್ತಹೀನತೆಗೆ ಅವಕಾಶ ನೀಡದೆ, ಸೊಪ್ಪು ತರಕಾರಿ ನಾರು ಬೇರು ಖನಿಜ ಅಂಶಯುಕ್ತ ಅನ್ನಾಂಗಯುಕ್ತ, ಪ್ರೋಟೀನ್‌ಯುಕ್ತ, ಹಣ್ಣು ಹಾಲು ಮೊಟ್ಟೆ ಮೀನು ಬೇಳೆ ಕಾಳುಗಳನ್ನ ಸೇವಿಸಿ. ಗರ್ಭಾವಸ್ಥೆಯಲ್ಲಿ ಮಹಿಳೆಯರ ಆರೈಕೆಗೆ ಕುಟುಂಬದ ಸದಸ್ಯರೆಲ್ಲರೂ ಒಗ್ಗೂಡಿ ಆರೈಕೆ ಮಾಡಿ ಎಂದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಧರ್, ಕಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ರೂಪ, ಸಮುದಾಯ ಆರೋಗ್ಯ ಅಧಿಕಾರಿ ಪ್ರತಿಭಾ, ಆಶಾ ಕಾರ್ಯಕರ್ತೆ ಮಂಜುಳಾ, ಗರ್ಭಿಣಿ, ಬಾಣಂತಿಯರು, ತಾಯಂದಿರು ಇದ್ದರು.

### ಸಾರ್ವಜನಿಕರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸಿ ಪ್ರಾಮಾಣಿಕ ಸೇವೆ ಸಲ್ಲಿಸಿ: ಲಕ್ಷ್ಮಣ್ ತಳವಾರ್



» **ಮೊಳಕಾಲ್ಮುರು**


ಮಳೆ ಇಲ್ಲದೆ ತಾಲೂಕಿನಾದ್ಯಂತ ಬರಗಾಲ ಆವರಿಸಿದ್ದು ಸಾರ್ವಜನಿಕರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸಿ

ಪ್ರಾಮಾಣಿಕ ಸೇವೆ ಸಲ್ಲಿಸಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ ಎಂದು ತಾ. ಪಂ. ಆಡಳಿತಾಧಿಕಾರಿ ಲಕ್ಷ್ಮಣ್ ತಳವಾರ್ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ತಾಕೀತು ಮಾಡಿದರು ಮೊಳಕಾಲ್ಮುರು ಪಟ್ಟಣದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ 2023-24ನೇ ಸಾಲಿನ ತಾಲ್ಲೂಕು ಪಂಚಾಯತಿ ಎರಡನೆ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅಧಿಕಾರಿಗಳಿಗೆ ಸೂಚಿಸಿದರುಮೊಳಕಾಲ್ಮೂರು ಮಳೆ ಇಲ್ಲದೆ ಬರಗಾಲ ಆವರಿಸುವ ಪರಿಸ್ಥಿತಿ ಇದೆ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ, ಕೆಟ್ಟಿರುವ ಶುದ್ಧ ನೀರಿನ ಘಟಕಗಳನ್ನು ಗುತ್ತಿಗೆ ಕಂಪನಿಗಳನ್ನು ಬ್ಲಾಕ್ ಲಿಸ್ಟ್ ಗೆ ಸೇರಿಸಲು ಶಿಫಾರಸ್ಸು ಮಾಡಿ, ಎಂದು ತಾಲೂಕು ಪಂಚಾಯಿತಿ ಆಡಳಿತಾ ಧಿಕಾರಿ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರಾದ ಲಕ್ಷ್ಮಣ್ ತಳವಾರ್ ತಿಳಿಸಿದರು.ಪಟ್ಟಣದ ತಾಲೂಕು ಪಂಚಾಯಿತಿಯಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡುತ್ತಾ, ತಾಲೂಕಿನಾದ್ಯಂತ ಎಪ್ಪತ್ತೆರಡು ಶುದ್ಧ ನೀರಿನ ಘಟಕಗಳು ಇದ್ದು, ಅದರಲ್ಲಿ ಹಲವು ಕಾರ್ಯ ನಿರ್ವಹಿಸುವಲ್ಲಿ ವಿಫಲವಾಗಿವೆ ಮುಖ್ಯವಾಗಿ ಇರುವ ಇಪ್ಪತ್ತು ಶುದ್ಧ ನೀರಿನ ಘಟಕಗಳು ಇದ್ದು ಇನ್ನು ಉಳಿದ ಹದಿನಾಲ್ಕು ಆರೋ ಪ್ಲಾಂಟ್ ಗಳು ದುರಸ್ತಿ ಯಲ್ಲಿವೆ ನಾಲ್ಕೈದು ವರ್ಷಗಳೆ ಕಳೆದರು ಸರಿಯಾಗಿಲ್ಲ ಎಂದರೆ ಎನು ಅರ್ಥ ಎಂದು ಕುಡಿಯುವ ನೀರು ವಿಭಾಗದ ಇಂಜಿನಿಯರ್ ಗಳನ್ನು ತರಾಟೆಗೆ ತೆಗೆದುಕೊಂಡು ನಿರ್ವಹಣೆಮಾಡದಾ ಕಂಪನಿಗಳ ವಿರುದ್ಧ ಕಠಿಣಕ್ರಮ ಕೈಗೊಳ್ಳುವಂತೆ ಶಿಪಾರಸ್ಸು ಮಾಡಿ ನೋಟಿಸ್ ಕೊಟ್ಟರು ಸ್ಪಂದಿಸದೆ ಇರುವ ಕಂಪನಿಗಳ ಗುತ್ತಿಗೆದಾರರ ಮೇಲೆ ಕಠಿಣ ಕ್ರಮ ಕೈಗೊಳ್ಳಿ ಎಂದು ಇಂಜಿನಿಯರ್ ಗಳಿಗೆ ತಾಕೀತು ಮಾಡಿದರು. ಇ ಓ ಕೆ. ಪ್ರಕಾಶ್ ಮಾತನಾಡಿ ಶುದ್ಧ ನೀರಿನ ಘಟಕಗಳು ಕೆಟ್ಟ ಮೇಲೆ ಅದರ ಮೆಂಟೆಸ್ ಹಣ ಹೇಗೆ ಬಿಡುಗಡೆಯಾಯಿತು, ನೀವು ಹೇಗೆ ರಿಲೀಸ್ ಮಾಡಿದ್ರಿ ಅದರ ಸಂಪೂರ್ಣ ಮಾಹಿತಿ ಕೊಡಿ, ಹಾಗೆ ಇನ್ನೊಂದು ವಾರದಲ್ಲಿ ಹದಿನಾಲ್ಕು ಆರೋ ಪ್ಲಾಂಟ್ ಗಳನ್ನು ರಡಿಯಾಗಬೇಕು ಎಂದರು

ಆರೋಗ್ಯ ಇಲಾಖೆ ಟಿ ಎಚ್ ಓ ಪ್ರಭಾರಿ ಮಧು ಕುಮಾರ್ ಪಶು ಇಲಾಖೆ ಅಧಿಕಾರಿ ರಂಗಪ್ಪ ಮಹಿಳಾ ಮತ್ತು ಮಕ್ಕಳ ಇಲಾಖೆ ಸಿಡಿ ಪಿಓ ನವೀನ್ ಕುಮಾರ್ ಅವಯಿಂದ ಮತ್ತು ಕೃಷಿ ಇಲಾಖೆ ಮಾಹಿತಿಯನ್ನು ಸ ನೀ ಉಮೇಶ್ ರಿಂದ ಮತ್ತು ಬೆಸ್ಕಾಂ ಅಧಿಕಾರಿಗಳಿಂದ ಮಾಹಿತಿ ಪಡೆದರು.

# ಸರ್ಪದ ಮೇಲೆ ಕಲ್ಪವೃಕ್ಷ ಯುವಕರ ಬಳಗದ ಗಣೇಶ

» **ಚಿತ್ರದುರ್ಗ**



ನೆಹರು ನಗರ ಫಸ್ಟ್ ಕ್ರಾಸ್‌ನಲ್ಲಿ ಕಲ್ಪವೃಕ್ಷ ಯುವಕರ ಬಳಗದ ವತಿಯಿಂದ 8 ನೇ ವರ್ಷದ ಗಣಪತಿಯನ್ನು ಪ್ರತಿಷ್ಠಾಪಿಸಿ ದಿನವೂ ಶ್ರದ್ಧಾಭಕ್ತಿಯಿಂದ ಪೂಜಿಸಲಾಗುತ್ತಿದೆ.

ಸರ್ಪದ ಮೇಲೆ ಅಲಂಕೃತಗೊಂಡಿರುವ ಗಣೇಶ ಆಕರ್ಷಿತವಾಗಿದೆ. ಪ್ರತಿ ವರ್ಷದಂತೆ ಈ ಬಾರಿಯೂ ಪೂಜೆ ಸಲ್ಲಿಸಿ ಶನಿವಾರ ಮೆರವಣಿಗೆಯ ಮೂಲಕ ವಿಸರ್ಜಿಸಲಾಗುವುದು.

ಗಣೇಶ ಪ್ರತಿಷ್ಠಾಪನೆ ಅಂಗವಾಗಿ ಬಣ್ಣದ ಬಣ್ಣದ ರಂಗೋಲಿ ಬಿಡಿಸಲಾಗಿದೆ.

ಅರುಣ್‌ಕುಮಾರ್, ಸಿದ್ದೇಶ್, ಸ್ವಾಮಿ, ರಘುಪಟ್ಲ, ಸಚಿನ್, ರಂಗಸ್ವಾಮಿ, ರಾಜ, ಮಂಜುನಾಥ್, ಲೋಹಿತ್, ನೆಹರು ನಗರದ ಮುಖಂಡರುಗಳಾದ ಮಂಜಣ್ಣ, ರವಿಕುಮಾರ್, ಪರಸಪ್ಪ ಈ ಸಂದರ್ಭದಲ್ಲಿದ್ದರು.

**ಪ್ರಮುಖ ಸುದ್ದಿ**

# ತಮಿಳುನಾಡಿಗೆ ಕಾವೇರಿ ನೀರು ಕರವೇ ಪ್ರತಿಭಟನೆ

» **ಚಿತ್ರದುರ್ಗ**



ತಮಿಳುನಾಡಿಗೆ ಕಾವೇರಿ ನೀರು ಬಿಡದಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆವತಿಯಿಂದ ಪ್ರಧಾನ ಅಂಚೆ ಕಛೇರಿ ಮುತ್ತಿಗೆ ಕಾರ್ಯಕ್ರಮ ಮತ್ತು ಕಾವೇರಿ ನಿರ್ವಹಣಾ ಪ್ರಾಧಿಕಾರದ ಆದೇಶದ ವಿರುದ್ಧ ಹೋರಾಟವನ್ನು ನಡೆಸಲಾಗಿದ್ದು ಅಂಚೆ ಕಚೇರಿಗೆ ನುಗ್ಗಲು ಎತ್ತಿಸಿದ ಕರವೇ ಕಾರ್ಯಕರ್ತರನ್ನು ಪೋಲಿಸರು ಬಂಧಿಸಿ ಬಿಡುಗಡೆ ಮಾಡಿರುವ ಘಟನೆ ನಡೆದಿದೆ.

ಕೃಷ್ಣರಾಜಸಾಗರ ಜಲಾಶಯದಲ್ಲಿ ಉಳಿದಿರುವುದು ಕೇವಲ 20 ಟಿ.ಎಂ.ಸಿ. ನೀರು, ಅದರಲ್ಲಿ ಬಳಕೆಗೆ ಸಿಗುವುದು ಕೇವಲ 15 ಟಿ.ಎಂ.ಸಿ. ನೀರು ಮಾತ್ರ ಇಂತಹ ಸಂದರ್ಭದಲ್ಲಿ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ ಸುಮಾರು 7 ಟಿ.ಎಂ.ಸಿ ಯಷ್ಟು ನೀರನ್ನು ತಮಿಳುನಾಡಿಗೆ ಹರಿಸಲು ಆದೇಶಿಸಿರುವುದು ಆಶ್ಚರ್ಯಕರವಾಗಿದೆ. ಅಘಾತಕರವಾಗಿದೆ, ಬೆಂಗಳೂರಿಗೆ ಪ್ರತಿ ತಿಂಗಳು, ಕುಡಿಯುವ ನೀರಿಗೆ 1.5 ಟಿ.ಎಂ.ಸಿ. ನೀರು ಬೇಕು, ಕಾವೇರಿ ಕಣಿವೆಯ ರೈತರ ಹೊಲ ಗದ್ದೆಗಳಿಗೆ ನೀರಿಲ್ಲ, ಕೈಗಾರಿಕೆಗಳಿಗೆ ಕೊಡಬೇಕಾದ ನೀರಿಲ್ಲ. ಹೀಗಿರುವಾಗ " ಟಿಎಂಸಿ, ನೀರು ಎಲ್ಲಿಂದ ತರಲು ಸಾಧ್ಯ ಮಂಡ್ಯ ಭಾಗದಲ್ಲಿ ರೈತರು ನೀರಿಗೆ ಏನು ಮಾಡಬೇಕು? ಬೆಂಗಳೂರಿನ 1.5 ಕೋಟಿ ಜನರು ಕುಡಿಯುವ ನೀರು ಇಲ್ಲದೆ ಸಾಯಬೇಕೆ ? ಕಾವೇರಿ ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ರಾಜ್ಯಸರ್ಕಾರ ಯಾವ ಕಾರಣಕ್ಕೂ ಪಾಲಿಸಬಾರದು. ನಾಡಿನ ಜನರ ಜೀವಗಳಿಗಿಂತ ಯಾವುದೇ ಪ್ರಾಧಿಕಾರದ ಆದೇಶದ ದೊಡ್ಡದಾಗಲು ಹೇಗೆ ಸಾಧ್ಯ ? ಈ ಪ್ರಾಧಿಕಾರ ಆದೇಶ ಪಾಲಿಸಲು ಹೋಗಿ ಅವರು ಹೇಳಿದಷ್ಟು ನೀರನ್ನು ಇದುವರೆಗೆ ಬಿಟ್ಟಿದೆ. ರಾಜ್ಯ ಸರ್ಕಾರ ದೊಡ್ಡ ತಪ್ಪು ಆಗಲು ಸರ್ಕಾರ ಸ್ಪಷ್ಟ ದೋರಣೆಯನ್ನು ಪ್ರಕಟಿಸಿದಂತೆ ಕಾಣುತ್ತಿಲ್ಲ. ಈಗಲಾದರೂ ರಾಜ್ಯ ಸರ್ಕಾರ ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾತನಾಡುವುದನ್ನು ಬಿಟ್ಟು ಯಾವುದೇ ಕಾರಣಕ್ಕೂ ನೀರು ಬಿಡುವುದಿಲ್ಲ' ಎಂಬ ದೃಢ ಘೋಷಣೆಯನ್ನು ಮಾಡಬೇಕು: ರಾಜ್ಯಸರ್ಕಾರ ಮತ್ತೆ ನೀರು ಬಿಟ್ಟರೆ ಕುಡಿಯುವ ನೀರು ಇಲ್ಲದೆ ಹಾಹಾಕಾರ ಉಂಟಾಗಲಿದೆ. ಅದರಿಂದ ಆಗುವ ಅನಾಹುತಗಳನ್ನು ಊಹಿಸಲು ಸಾಧ್ಯವಿಲ್ಲ. ರಾಜ್ಯದ ಎಲ್ಲಾ ಸಂಸದರು. ದೆಹಲಿಯಲ್ಲಿ ಧರಣಿ ನಡೆಸಬೇಕು, ಕೇಂದ್ರಸರ್ಕಾರದ ಮೇಲೆ ಒತ್ತಡ ಹೇರಬೇಕು, ರಾಜೀನಾಮೆ ನೀಡಲು ಸಿದ್ಧರಾಗಿರಬೇಕು. ಯಾವುದೇ ಕಾರಣಕ್ಕೂ ರಾಜ್ಯಸರ್ಕಾರ ಪ್ರಾಧಿಕಾರದ ಆದೇಶವನ್ನು ಪಾಲಿಸಬಾರದು. ತಮಿಳುನಾಡಿಗೆ ಮತ್ತೆ ನೀರು ಬಿಡಕೂಡದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.ಒಂದೊಮ್ಮೆ ಸರ್ಕಾರ ಅಂತಹ ದುಸ್ಸಾಹಕ್ಕೆ ಕೈಹಾಕಿದರೆ ರಾಜ್ಯದ ಜನರು ದಂಗೆ ಏಳುವ ಸ್ಥಿತಿ ನಿರ್ಮಾಣವಾಗುತ್ತದೆ. ಕರ್ನಾಟಕ ರಕ್ಷಣಾ ವೇದಿಕೆ ಉಗ್ರ ಸ್ವರೂಪದ ಪ್ರತಿಭಟನೆ ಹಮ್ಮಿಕೊಳ್ಳಲಿದೆ ಎಂದು ಈ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಯಿತು.ಈ ಪ್ರತಿಭಟನೆಯ ನೇತೃತ್ವವನ್ನು ಜಿಲ್ಲಾಧ್ಯಕ್ಷ. ಟಿ.ರಮೇಶ್ ವಹಿಸಿದ್ದರು. ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷ ರಾಜಪ್ಪ ಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ಚಿತ್ರದುರ್ಗ ನಗರ ಅಧ್ಯಕ್ಷ ಟಿ.ಕೆ. ಶಿವಮೂರ್ತಿ ಭಾಗವಹಿಸಿದ್ದರು. ಭಭಣಬನ ಜಿಲ್ಲಾ ಉಪಾಧ್ಯಕ್ಷ ಎಸ್.ಪಿ. ಗಣೇಶ್ ಜಿಲ್ಲಾ ಪ್ರಧಾನ ಸಂಚಾಲಕರು ಆರ್ ಜಿ ಲಕ್ಷ್ಮಣ ಟಿ. ವೆಂಕಟೇಶ್ ಪ್ರಸಾದ್ ಮಲ್ಲ ವಸಂತ್ ವೆಂಕಟೇಶ್ ಚಳ್ಳಕೆರೆ ತಾಲ್ಲೂಕು ಅಧ್ಯಕ್ಷ ರಾಮಕೃಷ್ಣಪ್ಪ ಗೋ ಬಸವರಾಜನ್ ದಾದಾಪೀರ್ ಜಾಕೀರ್ ಉದಯಶಂಕರ್ ಜಿಲ್ಲಾ ಮಹಿಳಾ ಅಧ್ಯಕ್ಷ ಚಂದ್ರಕಲಾ ವಿದ್ಯಾರ್ಥಿ ಘಟಕದ ಅಧ್ಯಕ್ಷ ಮನು ಜಿಲ್ಲಾ ಮಹಿಳಾ ಸಂಘಟನಾ ಕಾರ್ಯದರ್ಶಿ ಮಂಜುಳ ದಾಕ್ಷಾಯಣಿ ಸುಮ ಜ್ಯೋತಿ ಜಯಲಕ್ಷ್ಮಿ ರುದ್ರೇಶ್ ಮಾರುತಿ ಸೇರಿದಂತೆ ಇತರರು ಭಾಗವಹಿಸಿದ್ದರು

ಫಾಸ್ಟ್ ನ್ಯೂಸ್


## ಈ ಬಾರಿ ಸರಳ ದಸರಾ

» ಮೊದಲ ಪುಟದಿಂದ

ಸರಳ ದಸರಾ ಆಚರಿಸುವ ಬಗ್ಗೆ ಸಮಾಜಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ಅವರು ಟ್ವೀಟ್‌ನಲ್ಲಿ ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಕಾಣಿಸಿಕೊಂಡು ರೈತಾಪಿ ವರ್ಗ ಸಂಕಷ್ಟದಲ್ಲಿದೆ. ಹೀಗಾಗಿ ಅದ್ದೂರಿ ದಸರಾ ಆಚರಿಸುತ್ತಿಲ್ಲ. ಸರಳ ಹಾಗೂಅರ್ಥಪೂರ್ಣ ದಸರಾ ಆಚರಿಸಲು ನಿರ್ಧರಿಸಲಾಗುವುದು ಎಂದು ಟ್ವೀಟ್‌ನಲ್ಲಿ ತಿಳಿಸಿದ್ದಾರೆ.ರೈತ ಸಂಕಷ್ಟ ಸಂದರ್ಭಕ್ಕೆ ಪೂರಕವಾಗಿ ಈ ಬಾರಿ ಸರಳ ದಸರಾವನ್ನು ಆಚರಿಸಲು ನಿರ್ಧರಿಸಿದೆ ಎಂದು ಅವರು ಟ್ವೀಟ್‌ನಲ್ಲಿ ತಿಳಿಸಿದ್ದಾರೆ.ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ದಸರಾ ಉನ್ನತ ಮಟ್ಟದ ಸಭೆಯಲ್ಲಿ 2 ತಿಂಗಳ ಹಿಂದೆಯೇ ತೀರ್ಮಾನ ಮಾಡಲಾಗಿತ್ತು. ಈಗ ಬರ ಇರುವುದರಿಂದ ಸರ್ಕಾರ ಅದ್ದೂರಿ ದಸರಾ ನಿರ್ಧಾರದಿಂದ ಹಿಂದೆ ಸರಿದು ಸರಳ ಸಾಂಪ್ರಾದಾಯಿಕ ದಸರಾ ನಡೆಸಲು ಮುಂದಾಗಿದೆ.

**ಗಜಪಡೆಗಳು ಈಗಾಗಲೇ ಮೈಸೂರಿನಲ್ಲಿ ಬೀಡು:** ಮೈಸೂರು ದಸರಾ ಮಹೋತ್ಸವದ ವಿಶೇಷ ಆಕರ್ಷಣೆಯಾದ ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲು ಈಗಾಗಲೇ ಗಜಪಡೆಗಳು ಮೈಸೂರಿಗೆ ಆಗಮಿಸಿದ್ದು, ಗಜಪಡೆಗಳ ತಾಲೀಮು ಎಲ್ಲವೂ ನಡೆದಿದೆ.ಜಂಬೂಸವಾರಿಯಲ್ಲಿ ಅಂಬಾರಿ ಹೊರುವ ಅಭಿಮನ್ಯು ನೇತೃತ್ವದಲ್ಲಿ ಅರ್ಜುನ, ಭೀಮಾ, ಮಹೇಂದ್ರ, ಧನಂಜಯ, ಗೋಪಿ, ಕಂಜನ್, ವಿಜಯ ಹಾಗೂ ವರಲಕ್ಷ್ಮಿ ಆನೆಗಳು ಮೈಸೂರಿನಲ್ಲಿ ಬೀಡು ಬಿಟ್ಟಿದ್ದು, ಗೌರಿ-ಗಣೇಶ ಹಬ್ಬದ ಪ್ರಯುಕ್ತ ಸೆ. 18 ರಂದು ಗಜಪಡೆಗಳಿಗೆ ವಿಶೇಷ ಪೂಜೆಯನ್ನು ಸಲ್ಲಿಸಲಾಗಿದೆ.

## ಸೆ.26ರಂದು ವಿಶೇಷ ಚೇತನ ಮಕ್ಕಳ ಮೇಲಾಟಗಳ ಕ್ರೀಡಾಕೂಟ ಉದ್ಘಾಟನಾ ಸಮಾರಂಭ



» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 14, 17 ವರ್ಷ ವಯೋಮಿತಿಯೊಳಗಿನ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಬಾಲಕ, ಬಾಲಕಿಯರ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ವಿಶೇಷ ಚೇತನ ಮಕ್ಕಳ ಮೇಲಾಟಗಳ ಕ್ರೀಡಾಕೂಟ ಉದ್ಘಾಟನಾ ಸಮಾರಂಭವನ್ನು ಇದೇ ಸೆಪ್ಟೆಂಬರ್ 26ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕ್ರೀಡಾಕೂಟ ಉದ್ಘಾಟಿಸುವರು. ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ. ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ, ಸಿ.ಟಿ.ಇ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಸಹ ನಿರ್ದೇಶಕಿ ಟಿ.ಜಿ. ಲೀಲಾವತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಘಟಕದ ಅಧ್ಯಕ್ಷ ಕೆ.ಟಿ. ತಿಮ್ಮಾರೆಡ್ಡಿ ಸೇರಿದಂತೆ ಗೌರವಾನ್ವಿತ ನಗರಸಭಾ ಸರ್ವ ಸದಸ್ಯರು ಭಾಗವಹಿಸುವರು.

ಜಿಲ್ಲಾ ಮಟ್ಟದ ಶಾಲಾ ಮಕ್ಕಳ ಪಂದ್ಯಾವಳಿ ನಡೆಯುವ ಸ್ಥಳಗಳ ವಿವರ: ಜಿಲ್ಲಾ ಮಟ್ಟದ ಶಾಲಾ ಮಕ್ಕಳ ಪಂದ್ಯಾವಳಿಗಳು ಇದೇ ಸೆಪ್ಟೆಂಬರ್ 26 ಮತ್ತು 27 ರಂದು ಚಿತ್ರದುರ್ಗ ನಗರದ ವಿವಿಧ ಕ್ರೀಡಾಂಗಣಗಳಲ್ಲಿ ನಡೆಯಲಿದೆ. ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮ ಸೆ.26ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

ಸೆ.26ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ ಕ್ರೀಡೆ ನಡೆಯಲಿದೆ. ಸೆ.27 ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ (ವಿಶೇಷ ಚೇತನ ಮಕ್ಕಳ) ಕ್ರೀಡಾಕೂಟ, ಸರ್ಕಾರಿ ಕಲಾ ಕಾಲೇಜು ಮೈದಾನದಲ್ಲಿ ಥ್ರೋಬಾಲ್ ಮತ್ತು ಬಾಲ್‌ಬ್ಯಾಡ್ಮಿಟನ್, ಹಳೇ ಮಾಧ್ಯಮಿಕ ಶಾಲಾ ಮೈದಾನದಲ್ಲಿ ಕಬಡ್ಡಿ ಮತ್ತು ಖೋಖೋ (ಪ್ರಾಥಮಿಕಶಾಲೆವಿಭಾಗ),ಮಹಾರಾಣಿಪ್ರೌಢಶಾಲೆ ಕೋಟೆ ಎದುರು ಖೋಖೋ (ಪ್ರೌಢಶಾಲೆ ವಿಭಾಗ ಬಾಲಕಿಯರು), ಜೋಗಿಮಟ್ಟಿ ರಸ್ತೆಯ ಶ್ರೀ ವಾಸುದೇವ ರೆಡ್ಡಿ ಸ್ಮಾರಕ ಪ್ರೌಢಶಾಲೆಯಲ್ಲಿ ಖೋಖೋ (ಬಾಲಕರ ಪ್ರೌಢಶಾಲೆ ವಿಭಾಗ) ಕ್ರೀಡೆಗಳು ನಡೆಯಲಿವೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

# ರಾಜ್ಯದ ವಿದ್ಯುತ್ ಉತ್ಪಾದನೆ ಸ್ಥಾಪಿತ ಸಾಮರ್ಥ್ಯಕ್ಕಿಂತ ಕುಸಿದಿರುವುದು ಏಕೆ: ಸಿಎಂ ಸಿದ್ದರಾಮಯ್ಯ ಪ್ರಶ್ನೆ

- ಸದ್ಯ 32,009 ಮೆಗಾವ್ಯಾಟ್ ಉತ್ಪಾದನೆಯಾಗುತ್ತಿದ್ದು, ಕಳೆದ ನಾಲ್ಕು ವರ್ಷಗಳಲ್ಲಿ ಉತ್ಪಾದನೆ ಪ್ರಮಾಣ ಹೆಚ್ಚಳವಾಗಿಲ್ಲ
- ನಮ್ಮ ಮೊದಲ ಅವಧಿಯ ಸರ್ಕಾರದಲ್ಲಿ ಉತ್ಪಾದನೆ ದುಪ್ಪಟ್ಟಾಗಿತ್ತು
- 2013 -14ರಲ್ಲಿ 14,048 ಮೆಗಾವ್ಯಾಟ್ ಇದ್ದದ್ದು 2017-18ರ ವೇಳೆಗೆ 27,780 ಮೆಗಾವ್ಯಾಟ್‌ಗೆ ಉತ್ಪಾದನೆ ಏರಿಕೆಯಾಗಿತ್ತು: ಸಿಎಂ



» **ಬೆಂಗಳೂರು**

ರಾಜ್ಯದ ವಿದ್ಯುತ್ ಉತ್ಪಾದನೆ ಸ್ಥಾಪಿತ ಸಾಮರ್ಥ್ಯಕ್ಕಿಂತ ಕುಸಿತ ಕಂಡಿರುವುದು ಏಕೆ ಎಂದು ಮುಖ್ಯಮಂತ್ರಿ ಸಿದ್ದರಿಮಾಯ್ಯ ಅವರು ಪ್ರಶ್ನಿಸಿದರು.

ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ನಡೆದ ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಶ್ನಿಸಿದರು.

ಸದ್ಯ ಕೇವಲ 32,009 ಮೆಗಾ ವ್ಯಾಟ್ ಉತ್ಪಾದನೆ ಆಗುತ್ತಿದೆ. ಕಳೆದ ನಾಲ್ಕು ವರ್ಷಗಳಲ್ಲಿ ಉತ್ಪಾದನೆ ಪ್ರಮಾಣ ಹೆಚ್ಚಳವಾಗಿಲ್ಲ ಏಕೆ ಎಂದು ವಿವರಣೆಗಳನ್ನು ಕೇಳಿದರು.

ನಮ್ಮ ಮೊದಲ ಅವಧಿಯ ಸರ್ಕಾರದಲ್ಲಿ ಎಲ್ಲಾ ಸಮಸ್ಯೆಗಳ ನಡುವೆಯೇ ವಿದ್ಯುತ್ ಉತ್ಪಾದನೆ ದುಪ್ಪಟ್ಟಾಗಿತ್ತು. ನಾವು ಅಧಿಕಾರಕ್ಕೆ ಬಂದ 2013 -14ರಲ್ಲಿ 14,048 ಮೆಗಾವ್ಯಾಟ್ ಉತ್ಪಾದನೆ ಆಗುತ್ತಿತ್ತು. 2017-18ರ ವೇಳೆಗೆ 27,780 ಮೆಗಾವ್ಯಾಟ್‌ಗೆ ಉತ್ಪಾದನೆ ಏರಿಕೆಯಾಗಿತ್ತು. ಬಹುತೇಕ ದುಪ್ಪಟ್ಟಾಗಿತ್ತು ಎಂದು ಸ್ಮರಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಕೇಂದ್ರದಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ಕಲ್ಲಿದ್ದಲಿನ ಗುಣಮಟ್ಟ ಉತ್ತಮವಾಗಿಲ್ಲ. ಅಗತ್ಯಗುಣಮಟ್ಟದಲ್ಲಿ ಇಲ್ಲದಿರುವುದರಿಂದ ವಿದ್ಯುತ್ ಉತ್ಪಾದನೆಯ ಪ್ರಮಾಣದ ಮೇಲೆ ಪರಿಣಾಮ ಬೀರುತ್ತಿದೆ. ಈ ಬಗ್ಗೆ ಕೇಂದ್ರದ ಗಮನಕ್ಕೆ ತರಲಾಗಿದ್ದು, ಪ್ರತಿದಿನ ಎರಡು ರೇಕುಗಳಷ್ಟು ಹೆಚ್ಚುವರಿ ಕಲ್ಲಿದ್ದಲು ಹಂಚಿಕೆಗೆ ಕೋರಿದ್ದೇವೆ. ಇದಲ್ಲದೆ ಕಲ್ಲಿದ್ದಲು ಆಮದು ಮಾಡಲೂ ಸಹ ಟೆಂಡರ್ ಕರೆಯಲಾಗಿದೆ ಎಂದು ವಿವರಿಸಿದರು.

ರಾಜ್ಯದ ಸ್ಥಾಪಿತ ಸಾಮರ್ಥ್ಯಕ್ಕೆ ಅನುಸಾರವಾಗಿ ವಿದ್ಯುತ್ ಉತ್ಪಾದನೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ ಮುಖ್ಯಮಂತ್ರಿಗಳು ಉಷ್ಣವಿದ್ಯುತ್ ಸ್ಥಾವರಗಳಲ್ಲಿ ತೇವಗೊಂಡ ಕಲ್ಲಿದ್ದಲು ಬಳಕೆ ಮಾಡದಂತೆ ಸೂಚನೆ ನೀಡಿದರು.

ನೀರಾವರಿಗೆ ಸೌರ ವಿದ್ಯುತ್ ಪಂಪ್‌ಸೆಟ್‌ಗಳ ಬಳಕೆಯನ್ನು ಉತ್ತೇಜಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಇದರಿಂದ ಅಕ್ರಮ ನೀರಾವರಿ ಪಂಪ್‌ಸೆಟ್ ಹಾವಳಿ ಹಾಗೂ ವಿದ್ಯುತ್ ಪ್ರಸರಣ ಸೋರಿಕೆಯನ್ನು ತಡೆಗಟ್ಟಲು ಸಾಧ್ಯ ಎಂಬ ಅಂಶಗಳ ಕುರಿತು ಅಧಿಕಾರಿಗಳು ಮುಖ್ಯಮಂತ್ರಿಗಳ ಗಮನ ಸೆಳೆದರು.

ಗೃಹ ಜ್ಯೋತಿ ಯೋಜನೆಯಡಿ ಆಗಸ್ಟ್ ತಿಂಗಳಲ್ಲಿ 1.26 ಕೋಟಿ ಗ್ರಾಹಕರಿಗೆ ಹಾಗೂ ಸೆಪ್ಟೆಂಬರ್ ತಿಂಗಳಲ್ಲಿ 1.35 ಕೋಟಿ ಗ್ರಾಹಕರಿಗೆ ಶೂನ್ಯ ಮೊತ್ತದ ವಿದ್ಯುತ್ ಬಿಲ್ ನೀಡಲಾಗಿದೆ. ಇದಕ್ಕಾಗಿ 1400 ಕೋಟಿ ರೂ. ಒದಗಿಸಲಾಗಿದೆ ಎನ್ನುವ ವಿವರ ನೀಡಿದರು.

ಎಸ್ಕಾಂ ಗಳ ಆರ್ಥಿಕ ಸ್ಥಿತಿಗತಿ ಕುರಿತೂ ಸಹ ಸಭೆಯಲ್ಲಿ ಚರ್ಚಿಸಲಾಯಿತು. ವಿದ್ಯುತ್ ಸೋರಿಕೆ ಕುರಿತಂತೆ ರಾಜ್ಯದ ಎಲ್ಲ ಎಸ್ಕಾಂ ಗಳೂ ಹೆಚ್ಚಿನ ಗಮನ ಹರಿಸುವಂತೆ ಸೂಚಿಸಿದರು. ಅಂತೆಯೇ ಅಗತ್ಯವಿರುವಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಹಾಗೂ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಗೆ ಕ್ರಮ ವಹಿಸುವಂತೆ ಸೂಚಿಸಿದರು.

ಪ್ರಸಕ್ತ ವರ್ಷದಲ್ಲಿ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಗಾಗಿ 2500 ಕೋಟಿ ರೂ. ಒದಗಿಸಲಾಗಿದೆ. ರಾಜ್ಯದ ಪ್ರಸಕ್ತ ವಿದ್ಯುತ್ ಪರಿಸ್ಥಿತಿ ಕುರಿತು ಹಾಗೂ ಆರ್ಥಿಕ ಸ್ಥಿತಿಗತಿ ಕುರಿತಂತೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸುವುದು ಸೂಕ್ತ ಎಂದು ಮುಖ್ಯಮಂತ್ರಿಗಳು ಸಲಹೆ ನೀಡಿದರು.

ಸಭೆಯಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯಲ್, ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಆರ್ಥಿಕ ಇಲಾಖೆ ಕಾರ್ಯದರ್ಶಿ (ವೆಚ್ಚ) ಡಾ. ಎಂ.ಟಿ. ರೇಜು ಹಾಗೂ ಸರ್ಕಾರದ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಾನಪದ ಕಲಾತಂಡಗಳ ಆಯ್ಕೆ ಪ್ರಕ್ರಿಯೆಯಲ್ಲಿ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್

# ಮನೋರಂಜನೆಯೊಂದಿಗೆ ಸರ್ಕಾರದ ಯೋಜನೆ ಜನರಿಗೆ ತಲುಪಿಸಿ

» **ಚಿತ್ರದುರ್ಗ**

ಕಲಾತಂಡಗಳು ಮನೋರಂಜನೆಯೊಂದಿಗೆ ಸರ್ಕಾರದ ವಿವಿಧ ಯೋಜನೆಗಳನ್ನು ಜನರಿಗೆ ತಲುಪಿಸಬೇಕು ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮಾಹಿತಿ ಶಿಕ್ಷಣ ಸಂವಹನ, ಸಾಮಾಜಿಕ ವರ್ತನೆ ಬದಲಾವಣೆ ಸಂವಹನ ಕಾರ್ಯಕ್ರಮದಡಿಯಲ್ಲಿ ಜಾನಪದ ಕಲಾತಂಡಗಳ ಆಯ್ಕೆ ಪ್ರಕ್ರಿಯೆಯಲ್ಲಿ ಅವರು ಮಾತನಾಡಿದರು.

ಬೀದಿ ನಾಟಕಗಳ ಮೂಲಕ ನೀಡುವ ಕಲಾ ಪ್ರದರ್ಶನಗಳು ಬೆಳೆದು ಬಂದ ರೀತಿಯನ್ನು ತಿಳಿಸಿ, ಆಧುನಿಕ ಪೈಪೋಟಿ ಇರುವ ಈ ಸಂದರ್ಭದಲ್ಲಿ ಕಲಾತಂಡಗಳು ಮನೋರಂಜನೆಯೊಂದಿಗೆ ಸಾರ್ವಜನಿಕರು, ಆರೋಗ್ಯ ಇಲಾಖೆಯ ಯೋಜನೆಗಳನ್ನು ಒಪ್ಪಿಕೊಳ್ಳುವಂತಹ ಕಾರ್ಯನಿರ್ವಹಣೆ, ನಿಪುಣತೆ ಹೊಂದಬೇಕಿದೆ. ಮನೋರಂಜನೆಯೊಂದಿಗೆ ಇಲಾಖೆ ಯೋಜನೆಗಳ್ನು ಜನರಿಗೆ ತಲುಪಿಸಿ ಎಂದು ಹೇಳಿದರು.

ಜಿಲ್ಲಾ ಕುಟುಂಬ ಯೋಜನೆಗಳ ಅನುಷ್ಠಾನಾಧಿಕಾರಿ ಡಾ. ರೇಣುಪ್ರಸಾದ್ ಮಾತನಾಡಿ, ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನದಲ್ಲಿ ಪುರುಷರ ಭಾಗವಹಿಸುವಿಕೆ ಬಹಳಷ್ಟು ಕಡಿಮೆ ಇದೆ. ಬಾಲ್ಯ ವಿವಾಹಗಳು ಹೆಚ್ಚು ಹೆಚ್ಚು ನಡೆಯುತ್ತಲೇ ಇದೆ. ತಾಯಿ ಮರಣ ಶಿಶು ಮರಣ ನಿಯಂತ್ರಿಸಲು ಸ್ಥಳೀಯ ಭಾಷೆ ಬಳಸಿ ಜಾನಪದ ಕಲೆಯ ಮೂಲಕ ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯ ಯೋಜನೆಗಳ ಬಗ್ಗೆ ಮನನ ಮಾಡಿಕೊಡಿ ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ ಮಾತನಾಡಿ, ಕಲಾತಂಡಗಳ ಆಯ್ಕೆಯು





ಕಲಾತಂಡಗಳ ಅನುಭವ, ಉಪಯೋಗಿಸುವ ವಾದ್ಯ ಪರಿಕರಗಳು, ಕಲಾ ಪ್ರಕಾರ ಭಾಷೆಯ ಬಳಕೆ ಮತ್ತು ಪ್ರಭುತ್ವ, ಕಲಾತಂಡಗಳು ಉಪಯೋಗಿಸುವ ಸಮವಸ್ತ್ರ ಆಧಾರಿತ ಮಾನದಂಡ ರಚಿಸಿ ಅಂಕ ನಿಗದಿಪಡಿಸಲಾಗಿದೆ. ಗಳಿಸಿದ ಅಂಕದ ಮೇಲೆ ಆಯ್ಕೆ ಪ್ರಕ್ರಿಯೆ ನಡೆಯುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ್, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಆರ್.ಗೌರಮ್ಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್, ಮುಖ್ಯ ಆರೋಗ್ಯ ಮೇಲ್ವಿಚಾರಣಾಧಿಕಾರಿ ಎಂ.ಬಿ.ಹನುಮಂತಪ್ಪ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಜಾನಕಿ, ಜಿಲ್ಲಾ ಮೇಲ್ವಿಚಾರಣಾ ಅಧಿಕಾರಿ ಆಂಜನೇಯ,ಗಣಕಯಂತ್ರನಿರ್ವಾಹಕ ಜಬ್ಬರ್ ಸೇರಿದಂತೆ ಐದು ಕಲಾ ತಂಡಗಳಿಂದ 25 ಜನ ಕಲಾವಿದರು ಭಾಗವಹಿಸಿದ್ದರು.

## ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಪರಿಸರಸ್ನೇಹಿ ಚಟುವಟಿಕೆ

» **ಚಿತ್ರದುರ್ಗ**

ಇದೇ ಸೆಪ್ಟೆಂಬರ್ 27ರಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆಯನ್ನು "ಖಿಔಗಿಖಿಚಖಿ & ಉಖಇಇಓ ಖಓಗಿಇಖಖಿಒಇಓಖಿಖ" ಸಂದೇಶದಡಿಯಲ್ಲಿ ಆಚರಿಸಲಾಗುತ್ತಿದ್ದು, ಎಲ್ಲಾ ಜಿಲ್ಲೆಯಲ್ಲಿನ ಹೋಟೆಲ್, ರೆಸಾರ್ಟ್ ಮತ್ತು ಹೋಮ್‌ಸ್ಟೇಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಸ್ವಚ್ಛತೆ, ಪರಿಸರ ಮಾಲಿನ್ಯ ತಡೆಗಟ್ಟಲು ಹಾಗೂ ನೈರ್ಮಲ್ಯ ಶುಚಿತ್ವದ ಬಗ್ಗೆ ಅರಿವು ಮೂಡಿಸುವುದು ಸೇರಿದಂತೆ ಇನ್ನಿತರೆ ಪರಿಸರ ಸ್ನೇಹಿ ಚುಟುವಟಿಕೆಗಳನ್ನು ಪ್ರಸ್ತುತ ಪಡಿಸಲು ಎಲ್ಲಾ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಸಾಮಾನ್ಯ ಸಲಹೆಗಳನ್ನು ಪಾಲಿಸುವಂತೆ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ತಿಳಿಸಿದ್ದಾರೆ. ಸಾಮಾನ್ಯ ಸಲಹೆ: ರಾಜ್ಯದಾದ್ಯಂತ ಎಲ್ಲಾ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಈ ಬಾರಿಯ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಥೀಮ್‌ಅನ್ನು ಪರಿಸರಸ್ನೇಹಿ ಅಟಂಣು ಬ್ಯಾನರ್‌ನಲ್ಲಿ ಮುದ್ರಿಸಿ ಪ್ರದರ್ಶಿಸುವುದು. ಎಲ್ಲಾ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಸಾಂಪ್ರದಾಯಿಕ ಖಾದ್ಯಗಳನ್ನು ನೀಡುವುದು. ಪ್ರವಾಸಿ ತಾಣಗಳ ಕುರಿತ ವೀಡಿಯೋಗಳನ್ನು ಎಲ್ಲಾ ಹೋಟೆಲ್‌ಗಳು, ಕಚೇರಿಗಳಲ್ಲಿ ಪ್ರದರ್ಶಿಸುವುದು. ಸ್ವಚ್ಛತಾ ಅಭಿಯಾನಗಳನ್ನು ಕೈಗೊಳ್ಳುವುದು ಹಾಗೂ ಸಸಿಗಳನ್ನು ನೆಡುವುದು. ಎಲ್ಲಾ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳಲ್ಲಿ ವಿದ್ಯುತ್ ದೀಪಾಲಂಕಾರಗಳನ್ನು ಕೈಗೊಳ್ಳುವುದು. ಹೋಟೆಲ್, ರೆಸ್ಟೋರೆಂಟ್ ಕೊಠಡಿಗಳ ದರಗಳಲ್ಲಿ ವಿಶೇಷ ರಿಯಾಯಿತಿಯನ್ನು ನೀಡುವುದು. ಎಲ್ಲಾ ಹೋಟೆಲ್‌ಗಳಲ್ಲಿ ಛಾಯಾಚಿತ್ರಗಳನ್ನೊಳಗೊಂಡ ಸೆಲ್ಫಿ ಪಾಯಿಂಟ್‌ಗಳನ್ನು ಅಳವಡಿಸುವುದು. ಹೋಟೆಲ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಸಿಬ್ಬಂದಿಗಳಿಗೆ ಉಚಿತವಾಗಿ ಆರೋಗ್ಯ ತಪಾಸಣೆ ಕೈಗೊಳ್ಳುವಂತೆ ಸಲಹೆ ನೀಡಲಾಗಿದೆ ಎಂದು ಪ್ರವಾಸೋದ್ಯ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೆಹಲಿಯ ವಕೀಲರ ಅಂತರಾಷ್ಟೀಯ ಸಮ್ಮೇಳನದಲ್ಲಿಅರುಣ್‌ಕುಮಾರ್

**ದಾವಣಗೆರೆ:** ಇದೇ 23, 24ರಂದು ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ವಕೀಲರ ಸಮ್ಮೇಳನ-2023ಕ್ಕೆ ದಾವಣಗೆರೆಯ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಹೆಚ್.ಅರುಣ್‌ಕುಮಾರ್ ಪಾಲ್ಗೊಳ್ಳಲು ದೆಹಲಿಗೆ ತೆರಳಿದ್ದಾರೆ. ರಾಜ್ಯದ ವಕೀಲರ ಪರಿಷತ್ತಿನ ಪದಾಧಿಕಾರಿಗಳು ಹಾಗೂ ಜಿಲ್ಲಾ ವಕೀಲರ ಸಂಘದ ಜಿಲ್ಲಾಧ್ಯಕ್ಷರು ಸೇರಿದಂತೆ ದೇಶದ ವಿವಿಧ ರಾಜ್ಯಗಳಿಂದಲೂ ವಕೀಲರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಸಮ್ಮೇಳನವನ್ನು ಅಂದು ಮಧ್ಯಾಹ್ನ 2ಕ್ಕೆ ದೇಶದ ಪ್ರಧಾನಮಂತ್ರಿ ನರೇಂದ್ರಮೋದಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ಗಣ್ಯರು ಭಾಗವಹಿಸಲಿದ್ದಾರೆ.

ಪ್ರಮುಖ ಸುದ್ದಿ

# ಬಾಪೂಜಿ ಪ್ರಬಂಧ ಸ್ಪರ್ಧೆ: ಸೆ.26 ಕೊನೆಯ ದಿನ

» **ಚಿತ್ರದುರ್ಗ**

ಮಹಾತ್ಮ ಗಾಂಧೀಜಿಯವರ 154ನೇ ಜಯಂತಿ ಅಂಗವಾಗಿ ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನುವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಆಯೋಜಿಸಿದ್ದು, ಆಯಾ ಶಾಲಾ ಕಾಲೇಜುಗಳ ಮುಖ್ಯಸ್ಥರು ಅತ್ಯುತ್ತಮ 03 ಪ್ರಬಂಧಗಳನ್ನು ಆಯ್ಕೆ ಮಾಡಿ ಸಲ್ಲಿಸಲು ಸೆ. 26 ಕೊನೆಯ ದಿನವಾಗಿದೆ.

ಗಾಂಧೀಜಿ ಜಯಂತಿ ಅಂಗವಾಗಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ,ಅಸ್ಪೃಶ್ಯತೆನಿವಾರಣೆಗಾಗಿನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಆಯೋಜಿಸಿದ್ದು, ಪ್ರಬಂಧಗಳನ್ನು ವಿದ್ಯಾರ್ಥಿಗಳು ಆಯಾ ಶಾಲಾ ಕಾಲೇಜುಗಳ ಮುಖ್ಯಸ್ಥರಿಗೆ ಸಲ್ಲಿಸಬೇಕು. ಆಯಾ ಶಾಲಾ ಕಾಲೇಜು ಮುಖ್ಯಸ್ಥರು, ಅತ್ಯುತ್ತಮವಾದ 03 ಪ್ರಬಂಧಗಳನ್ನು ಆಯ್ಕೆ ಮಾಡಿ, ಸೆ. 26 ರ ಒಳಗಾಗಿ ಸಲ್ಲಿಸಬೇಕು.

ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 3 ಸಾವಿರ ರೂ, 2 ಸಾವಿರ ರೂ. ಹಾಗೂ 1 ಸಾವಿರ ರೂ. ಹಾಗೂ ರಾಜ್ಯ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 31 ಸಾವಿರ ರೂ, 21 ಸಾವಿರ ರೂ. ಹಾಗೂ 11 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು. ವಿಭಾಗಾವಾರು ಪ್ರಬಂಧದ ವಿಷಯಗಳು ಈ ಕೆಳಗಿನಂತಿವೆ.

ಪ್ರೌಢ ಶಾಲಾ ವಿಭಾಗ :- 1) ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ. 2) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. 3) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ವಿದ್ಯಾರ್ಥಿಗಳು ರಚಿಸಬೇಕು



ಪದವಿ ಪೂರ್ವ ಶಿಕ್ಷಣ ವಿಭಾಗ :- 1) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು. 2) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ. 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ವಿದ್ಯಾರ್ಥಿಗಳು ರಚಿಸಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ :- 1) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು. 2) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು. 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. 4) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.

ಪ್ರತಿ ಶಾಲೆ / ಕಾಲೇಜು / ಸ್ನಾತಕೋತ್ತರ ಪದವಿ ವಿಭಾಗಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿನ ಆಯ್ದ ಅತ್ಯುತ್ತಮವಾದ ಮೂರು ಪ್ರಬಂಧಗಳನ್ನು ಸೆ. 26 ರೊಳಗಾಗಿ ಜಿಲ್ಲಾ ವಾರ್ತಾಧಿಕಾರಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,ವಾರ್ತಾ ಭವನ,ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ-577501 ಈ ವಿಳಾಸಕ್ಕೆ ತಲುಪಿಸಬೇಕು.

ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮವೆನಿಸಿದ ಪ್ರತಿ ವಿಭಾಗದಲ್ಲಿನಮೂರು(3)ಪ್ರಬಂಧಗಳನ್ನು ಆಯ್ಕೆ ಮಾಡಿ ಅವುಗಳಲ್ಲಿ ಅತ್ಯುತ್ತಮವಾದ ಪ್ರಬಂಧಗಳಿಗೆ ರಾಜ್ಯಮಟ್ಟದ ಸ್ಪರ್ಧೆಗೆ ಸಲ್ಲಿಸಲಾಗುವುದು. ಪ್ರಬಂಧ ರಚಿಸಲು ಮಾರ್ಗಸೂಚಿಗಳು :- ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಪ್ರಬಂಧವು ಕನ್ನಡದಲ್ಲಿ ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯೂನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು ಎಂದು ಪ್ರಕಟಣೆ ತಿಳಿಸಿದೆ.

# ಸರ್ಕಾರಿ ಆಸ್ಪತ್ರೆ ಪಾತ್ರ ಮಹತ್ವ: ನ್ಯಾ.ವಿಜಯ್

» ಹೊಳಲ್ಕೆರೆ

ನಾಗರೀಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಹೊಳಲ್ಕೆರೆ ಸರ್ಕಾರಿ ಆಸ್ಪತ್ರೆ ಸುವಸ್ಥಿತವಾದ ಸೌಲಭ್ಯವನ್ನು ಒಳಗೊಂಡಿದ್ದು ಆರೋಗ್ಯವಂತ ಸಮಾಜ ಕಟ್ಟಲು ಪ್ರತಿಯೊಬ್ಬರು ಸದ್ಬಳಕೆ ಮಾಡಿಕೊಳ್ಳಬೇಕಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಗೌರವ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾಯಾಧೀಶರಾದ ವಿಜಯ್ ತಿಳಿಸಿದ್ದಾರೆ.

ಅವರು ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ಶುಕ್ರವಾರ ಬೆಳಗ್ಗೆ ಭೇಟಿ ನೀಡಿ ಆಸ್ಪತ್ರೆಯ ವ್ಯವಸ್ಥೆಗಳನ್ನು ಪರಿಶೀಲಿಸಿ ಮಾತನಾಡಿದರು.

ಗ್ರಾಮೀಣಪ್ರದೇಶದಲ್ಲಿಸಾಕಷ್ಟುಆರೋಗ್ಯ ಸಮಸ್ಯೆಗಳು ಕಂಡುಬರುತ್ತವೆ. ಅಂತಹ ಸಮಸ್ಯೆಗಳಿಗೆ ಪರಿಹಾರೋಪಾಯವಾಗಿ ಸರ್ಕಾರಿ ಆಸ್ಪತ್ರೆಗಳು ಕೆಲಸ ಮಾಡಬೇಕಾಗಿದೆ. ಹಾಗಾಗಿ ಹೊಳಲ್ಕೆರೆ ಪಟ್ಟಣದಲ್ಲಿರುವ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ, ಸುಸರ್ಜಿತವಾದ ಕಟ್ಟಡದ ಜೊತೆಗೆ ರೋಗಿಗಳಿಗೆ ಬೇಕಾದ ಎಲ್ಲಾ ರೀತಿಯ ಆರೋಗ್ಯ ಪೂರಕ ಚಿಕಿತ್ಸೆ ನೀಡಲು ಸೌಲಭ್ಯ ಹೊಂದಿದೆ. ಜೊತೆಗೆ ಉತ್ತಮವಾದ ಕೊಠಡಿಗಳು, ಸ್ವಚ್ಛತೆ, ಪರೀಕ್ಷಾ ಉಪಕರಣಗಳು, ಚಿಕಿತ್ಸಾ ಸಾಧನಗಳು ಇಲ್ಲಿ ಕಂಡುಬಂದಿದ್ದು, ಉತ್ತಮವಾದ ಆರೋಗ್ಯ ಚಿಕಿತ್ಸೆಗೆ ಎಲ್ಲಾ ಸೌಲಭ್ಯಗಳನ್ನು ಸರ್ಕಾರಿ ಆಸ್ಪತ್ರೆ ಒಳಗೊಂಡಿರುವುದು ಶ್ಲಾಘನೀಯ ಎಂದರು.



ಸರ್ಕಾರ ಆರೋಗ್ಯವಂತ ಸಮಾಜ ಕಟ್ಟಲು ಬೇಕಾದ ಎಲ್ಲಾ ರೀತಿ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದೆ.

ಹಾಗಾಗಿ ಅಗತ್ಯವಿರುವವರು ಸರ್ಕಾರಿ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಆರೋಗ್ಯವಂತ ಸಮಾಜವನ್ನು ಕಾಯ್ದುಕೊಳ್ಳಬೇಕಾಗಿದೆ. ಇಂದು ಸರಕಾರಗಳು ರೋಗಗಳಿಗೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶ ದಿಂದ ಹಲವಾರು ಯೋಜನೆ ಜಾರಿಗೊಳಿಸಿದೆ. ಹಣ ವ್ಯಯಿಸುವ ಅಗತ್ಯವಿಲ್ಲ. ಸರಕಾರಿ ಅಸ್ಪತ್ರೆಗಳಲ್ಲಿ ಚಿಕಿತ್ಸೆ ಜತೆ ಔಷಧಿಗಳನ್ನು ನೀಡಲಾಗುತ್ತದೆ. ಹಾಗಾಗಿ ಯರೊಬ್ಬರು ಅತಂಕ ವ್ಯಕ್ತಪಡಿಸುವ ಅಗತ್ಯವಿಲ್ಲ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಎಸ್.ಶರವಣನ್ ಮಾತನಾಡಿ, ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಬೃಹತಾಗಿ ಹಾಗೂ ಆಧುನಿಕ ಶೈಲಿಯಲ್ಲಿ ವಿನ್ಯಾಸಗೊಳಿಸಿದ ಆಸ್ಪತ್ರೆಯನ್ನು ನಿರ್ಮಾಣ ಮಾಡಲಾಗಿದೆ. ಜೊತೆಗೆ ಆಸ್ಪತ್ರೆಗೆ ಬೇಕಾದ ಪೂರಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ಉತ್ತಮ ಪರಿಸರದ ಜೊತೆ, ಉತ್ತಮ ಚಿಕಿತ್ಸೆ ಇಲ್ಲಿನ ರೋಗಿಗಳಿಗೆ ಸಿಕ್ಕುವಂತಾಗಬೇಕು. ಈ ನಿಟ್ಟಿನಲ್ಲಿ ಇಲ್ಲಿನ ವೈದ್ಯರುಗಳು ಸಾಕಷ್ಟು ಪರಿಶ್ರಮದಿಂದ ಆರೋಗ್ಯ ಸೇವೆಯನ್ನು ಕಲ್ಪಿಸಿ ಕೊಡುತ್ತಿದ್ದಾರೆ. ಹಾಗಾಗಿ ಪ್ರತಿಯೊಬ್ಬರೂ ಆರೋಗ್ಯದ ಕಡೆ ಹೆಚ್ಚು ಒತ್ತು ನೀಡಿ ಆರೋಗ್ಯವನ್ನು ಕಾಪಾಡಿಕೊಳ್ಳಲು ಮುಂದಾಗಬೇಕು. ಪ್ರತಿಯೊಬ್ಬರಿಗೂ ಉತ್ತಮ ಆರೋಗ್ಯ ಸೇವೆ ಕಲ್ಪಸುವ ಉದ್ಧೇಶ ಕಾನೂನು ಪ್ರಾಧಿಕಾರಕ್ಕೆ ಇದೆ. ಹಾಗಾಗಿ ನ್ಯಾಯಾಧೀಶರೇ ಖುದ್ದು ಬೇಟಿ ನೀಡಿ ಪರಿಶೀಲಿಸಿ ಇಲ್ಲಿನ ವ್ಯವಸ್ಥೆ ಬಗ್ಗೆ ಪರಿಶೀಲನೆ ನಡೆಸಿದೆ. ಸಮಸ್ಯೆಗಳಿದ್ದಲ್ಲಿ ಸೂಕ್ತ ವರದಿ ಮೂಲಕ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಪಟ್ಟಣದ ಪ್ರಿನ್ಸಿಪಲ್ ನ್ಯಾಯಾಲಯದ ನ್ಯಾಯಾಧೀಶರಾದ ಎಂ.ಪಿ.ಉಮೇಶ್ ಆಸ್ಪತ್ಸೆಯಲ್ಲಿರುವ ಕೆಲಸ ದಾಖಲೆಗಳನ್ನು ಪರಶೀಲಿಸಿದರು. ಅಪ್ಪರ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಅನುಪಮ ರೇಣುಕಪ್ಪ ದಂಗ, ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಆಡಳಿತಾಧಿಕಾರಿ ಡಾ.ವಿನಯ್ ಸಜ್ಜನ್, ತಾಲೂಕ ಆರೋಗ್ಯ ಅಧಿಕಾರಿ ಡಾ.ರೇಖಾ, ಮಕ್ಕಳ ತಜ್ಞರಾದ ಡಾ.ಮಂಜುನಾಥ, ಕಿಲು ಮೂಳೆ ತಜ್ಞಾರಾದ ಡಾ. ಮಂಜುನಾಥ್, ತಜ್ಞಾ ವೃದ್ಯ ಡಾ.ಹರೀಶ್ ಬಾಬು, ಫಿಜಿಷಿಯನ್ ಡಾ.ವೀರಭದ್ರಪ್ಪ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿಗಳು, ಸಾರ್ವಜನಿಕರು, ರೋಗಿಗಳು ಉಪಸ್ಥಿತರಿದ್ದರು. ಇದೇ ಸಮಯದಲ್ಲಿ ಆಸ್ಪತ್ರೆಯ ಕೊಠಡಿಗಳು, ರೋಗಿಗಳ ವಾರ್ಡ್, ಶೌಚಾಲಯ, ಔಷಧಿ ದಾಸ್ತಾನು ಕೋಠಡಿ, ಔಷಧ ವಿತರಣೆ, ಮತ್ತಿತರ ಸೌಲಭ್ಯಗಳನ್ನು ನ್ಯಾಯಾಧೀಶರುಗಳು ಪರಿಶೀಲಿಸಿದರು.

ಎಸ್. ವೇದಮೂರ್ತಿ ಹೊಳಲ್ಕೆರೆ ಇದ್ದರು.

# ಛಲವಾದಿ ಮಹಾಸಭಾಕ್ಕೆ 31ಕ್ಕೆ ಚುನಾವಣೆ

» ಚಿತ್ರದುರ್ಗ

ಜಿಲ್ಲಾ ಛಲವಾದಿ ಮಹಾಸಭಾದ ಹೋಬಳಿ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸಮಿತಿ ಆಯ್ಕೆ ಮಾಡುವ ಸಂಬಂಧ ಅ.31 ರಂದು ಚುನಾವಣೆ ನಡೆಸಲು ತೀರ್ಮಾನಿಸಲಾಯಿತು.

ನಗರದ ಹೊರವಲಯ ಸೀಬಾರದ ಸಮೀಪವಿರುವ ಛಲವಾದಿ ಗುರುಪೀಠದಲ್ಲಿ ಗುರುವಾರ ನಡೆದ ಸಭೆಯಲ್ಲಿ ಛಲವಾದಿ ಜನಾಂಗದವರೊಂದಿಗೆ ಚರ್ಚಿಸಿದ ಬಸವನಾಗಿದೇವಸ್ವಾಮಿ ಛಲವಾದಿ ಮಹಾಸಭೆಗೆ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಅಧ್ಯಕ್ಷರುಗಳನ್ನು ನೇಮಕ ಮಾಡಬೇಕಿರುವುದರಿಂದ ಅ.26 ರಂದು ನಾಮಪತ್ರ ಸಲ್ಲಿಸಿ ಅಂದೇ ವಾಪಸ್ ಪಡೆಯಬಹುದು. ನಂತರ ನಾಮಪತ್ರಗಳನ್ನು ಸ್ವೀಕೃತಗೊಳಿಸಿ 31 ಕ್ಕೆ ಚುನಾವಣೆ ನಡೆಸಲು ನಿರ್ಧರಿಸಿದರು.

ಛಲವಾದಿ ಜನಾಂಗಕ್ಕೆ ಸೇರಿದ 300 ಜನರ ಪಟ್ಟಿ ಸಿಕ್ಕಿದೆ. ವಿಳಾಸ ದೂರವಾಣಿ ಇಲ್ಲದ್ದು, ಐವತ್ತಿದೆ. ಅರವತ್ತು ಪತ್ರಗಳು ವಾಪಸ್ ಬಂದಿವೆ. ಛಲವಾದಿ ಗುರುಪೀಠ ಪ್ರಾಮಾಣಿಕವಾಗಿದೆ. ಯಾರಿಗೂ ಮೋಸ ಮಾಡಿಲ್ಲ. ನನ್ನ ಪಟ್ಟಾಧಿಕಾರವಾಗಿ 25 ವರ್ಷಗಳಾಗಿದೆ. ಛಲವಾದಿ ಮಹಾಸಭಾವನ್ನು ಲೀಡ್ ಮಾಡಿ ಎಂದು ನಿವೃತ್ತ ಐ.ಎ.ಎಸ್. ಅಧಿಕಾರಿ ಕೆ.ಶಿವರಾಂ ಹೇಳಿದ್ದಾರೆ. ಕೆಲವರು ಕೇಸು ಹಾಕಿ ಮಠದ ಅಭಿವೃದ್ದಿಗೆ ಅಡ್ಡಗಾಲಾಗಿದ್ದಾರೆ. ಎಲ್ಲವನ್ನು ನಿಭಾಯಿಸಿಕೊಂಡು ಬರುತ್ತಿದ್ದೇನೆ. ಸಮಾಜದ ಆಸ್ತಿ. ಮತ್ತೊಂದು ಮಗದೊಂದು ಉಳಿಸಿಕೊಂಡು ಮುಂದುವರೆಯುತ್ತಿದ್ದೇನೆ. ಸಮುದಾಯ ಭವನ. ಮಠ ಕಟ್ಟಬೇಕಿದೆ. ಎಲ್ಲಿಯೂ ಭಿನ್ನಾಭಿಪ್ರಾಯವಿಲ್ಲ. ಎಲ್ಲರ ಸಲಹೆ ಸೂಚನೆಗಳನ್ನು ಸ್ವೀಕರಿಸುತ್ತೇನೆಂದು ಹೇಳಿದರು.



ಜಿಲ್ಲಾ ಛಲವಾದಿ ಜನಾಂಗದ ಮುಖಂಡ ಅಣ್ಣಪ್ಪಸ್ವಾಮಿ ಮಾತನಾಡಿ 2009 ರಲ್ಲಿ ಜಿಲ್ಲಾ ಛಲವಾದಿ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷನಾಗಿದ್ದಾಗ ಭರಮಸಾಗರ, ತುರುವನೂರು, ಹಿರೇಗುಂಟನೂರು ಹೋಬಳಿ ಮಟ್ಟದ ಸಮಾವೇಶ ನಡೆಸಿದ್ದೆ. ಸಂಘಟಿತರಾಗಿ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕಿದೆ ಎಂದು ಛಲವಾದಿ ಜನಾಂಗಕ್ಕೆ ಕರೆ ನೀಡಿದರು.

ಆರ್ಥಿಕವಾಗಿ ಛಲವಾದಿ ಜನಾಂಗ ಸಂಕಷ್ಟದಲ್ಲಿದೆ. ಜನಾಂಗಕ್ಕೆ ಹಾಸ್ಟೆಲ್, ಸ್ಕೂಲ್, ಸಮುದಾಯ ಭವನ ಕಟ್ಟಿಸಿಕೊಳ್ಳಬೇಕಾದರೆ ಸರ್ಕಾರದಿಂದ ಅನುದಾನ ಪಡೆಯಲೇಬೇಕು. ಹಾಗಾಗಿ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಮೊದಲು ಎಲ್ಲರೂ ಒಗ್ಗಟ್ಟಾಗಬೇಕಿದೆ ಎಂದು ಸಭೆಯಲ್ಲಿ ಸಲಹೆ ನೀಡಿದರು.

ರಾಮಚಂದ್ರಪ್ಪ ಮಾತನಾಡುತ್ತ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯದಂತೆ ಛಲವಾದಿ ಜನಾಂಗ ಸಂಘಟನೆ, ಶಿಕ್ಷಣ, ಹೋರಾಟದ ಮೂಲಕ ಬೆಳೆಯಬೇಕು. ಗೊಂದಲ ನಿವಾರಿಸಿಕೊಂಡು ಬಸವನಾಗಿದೇವಸ್ವಾಮಿಗಳಿಗೆ ಎಲ್ಲರೂ ಬೆಂಬಲವಾಗಿ ನಿಂತಾಗ ಮಠ ಅಭಿವೃದ್ದಿಯಾಗಲು ಸಾಧ್ಯ. ಸೇವೆ ಮಾಡುವ ಮನಸ್ಸಿದ್ದವರು ಯಾರಾದರೂ ಅಧ್ಯಕ್ಷರಾಗಲಿ ಎಂದು ಹೇಳಿದರು.

ಛಲವಾದಿ ಮಹಾಸಭಾದ ರಾಜ್ಯ ಜಂಟಿ ಕಾರ್ಯದರ್ಶಿ ಹಾಗೂ ಚಿತ್ರದುರ್ಗ-ತುಮಕೂರು ಉಸ್ತುವಾರಿ ಟಿ.ಆರ್.ನಾಗೇಶ್, ಶೇಷಣ್ಣ, ಮಂಜುಳ ವೇದಿಕೆಯಲ್ಲಿದ್ದರು.

# ಜಿಲ್ಲಾ ಕಾಂಗ್ರೆಸ್ ಕಿಸಾನ್‌ಸೆಲ್‌ಗೆ ಉಪಾಧ್ಯಕ್ಷರಾಗಿ ಶಿವಲಿಂಗಪ್ಪ ನೇಮಕ



» ಚಿತ್ರದುರ್ಗ

ಜಿಲ್ಲಾ ಕಾಂಗ್ರೆಸ್ ಸಮಿತಿ ಕಿಸಾನ್‌ಸೆಲ್ ವಿಭಾಗದ ಜಿಲ್ಲಾ ಉಪಾಧ್ಯಕ್ಷರಾಗಿ ನೇಮಕಗೊಂಡಿರುವ ಚಿತ್ರದುರ್ಗ ವಿದ್ಯಾನಗರದ ಏಳುಕೋಟಿ ಲೇಔಟ್‌ನ ನಿವಾಸಿ ಶಿವಲಿಂಗಪ್ಪನವರಿಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಶುಕ್ರವಾರ ಕೆ.ಪಿ.ಸಿ.ಸಿ. ಕಾರ್ಯಾಧ್ಯಕ್ಷರಾದ ಸಲೀಂ ಅಹಮದ್ ನೇಮಕ ಪತ್ರ ವಿತರಿಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದು, ಮುಂದಿನ ದಿನಗಳಲ್ಲಿ ಎದುರಾಗುವ ಜಿಲ್ಲಾ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಹಾಗೂ ಲೋಕಸಭೆ ಚುನಾವಣೆಯನ್ನು ಗೆಲ್ಲಬೇಕಾಗಿರುವುದರಿಂದ ಜಿಲ್ಲೆಯಲ್ಲಿ ಕಿಸಾನ್ ಸೆಲ್ ವಿಭಾಗವನ್ನು ಸಂಘಟಿಸುವತ್ತ ಪ್ರಾಮಾಣಿಕವಾಗಿ ಶ್ರಮಿಸುವಂತೆ ಶಿವಲಿಂಗಪ್ಪನವರಿಗೆ ಕೆ.ಪಿ.ಸಿ.ಸಿ. ಕಾರ್ಯಾಧ್ಯಕ್ಷ ಸಲೀಂ ಅಹಮದ್ ಸೂಚಿಸಿದರು.ಜಿಲ್ಲಾ ಕಾಂಗ್ರೆಸ್ ಕಿಸಾನ್ ಸೆಲ್ ವಿಭಾಗದ ಅಧ್ಯಕ್ಷ ಎ.ನಾಗರಾಜ್, ಕೆ.ಪಿ.ಸಿ.ಸಿ.ಮಹಿಳಾ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಚಿತ್ರದುರ್ಗ ನಗರಸಭೆ ಮಾಜಿ ಉಪಾಧ್ಯಕ್ಷ ಬಿ.ರಾಮಜ್ಜ. ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಕೆ.ಆರ್.ಮಂಜುನಾಥ್, ಮಾಡನಾಯಕನಹಳ್ಳಿ ಸೋಮಶೇಖರ್, ಚಿಕ್ಕಪ್ಪನಹಳ್ಳಿ ಪ್ರಶಾಂತ್ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.




ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ಒಂದು ದಿನದ ಸೈಕೋಡ್ರಾಮಾ ಕಾರ್ಯಾಗಾರವನ್ನು ಕೆ.ಎಂ.ವೀರೇಶ್ ಉದ್ಘಾಟಿಸಿದರು.

# ಸೈಕೋಡ್ರಾಮಾ ಕಾರ್ಯಾಗಾರ ಉದ್ಘಾಟಿಸಿ ಕೆ.ಎಂ.ವೀರೇಶ್

» ಚಿತ್ರದುರ್ಗ

ಅವಿಭಕ್ತ ಕುಟುಂಬಗಳು ಕಾಣೆಯಾಗಿದ್ದು, ಬಾಂಧವ್ಯ, ಸಂಬಂಧಗಳು ಅಳಸುತ್ತಿವೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅದ್ಯಕ್ಷ ಹಾಗೂ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್ ವಿಷಾಧಿಸಿದರು.

ರಂಗಸೌರಭ ಕಲಾ ಸಂಘ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶುಕ್ರವಾರ ನಡೆದ ಒಂದು ದಿನದ ಸೈಕೋಡ್ರಾಮ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ರಂಗಕಲೆಗೆ ಪ್ರೋತ್ಸಾಹ ನೀಡಬೇಕಿದೆ. ಶಿಕ್ಷಣದ ಜೊತೆ ವಿದ್ಯಾರ್ಥಿಗಳು ರಂಗಕಲೆಯ ಬಗ್ಗೆ ಆಸಕ್ತಿ ಮೂಡಿಸಿಕೊಳ್ಳಬೇಕು. ನಾಟಕ, ರಂಗಕಲೆ ವಿಭಿನ್ನವಾದುದು, ಅಶೋಕ್‌ಬಾದರ್‌ದಿನ್ನಿ ಒಳ್ಳೆಯ ರಂಗ ಕಲಾವಿದರಾಗಿದ್ದು, ನಮ್ಮನ್ನೆಲ್ಲಾ ಅಗಲಿದ್ದರು ಇನ್ನು ರಂಗಭೂಮಿಯಿಂದ ಮರೆಯಾಗಿಲ್ಲ ಎಂದು ನೆನಪಿಸಿಕೊಂಡರು.

## ಪ್ರಮುಖ ಸುದ್ದಿ

# ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರಾಗಿ ಅನ್ವರ್‌ಭಾಷಾ ಆಯ್ಕೆ

» ಚಿತ್ರದುರ್ಗ

ಯಾವುದೇ ಜಾತಿ ತಾರತಮ್ಯವಿಲ್ಲದೆ ಎಲ್ಲರೂ ನನ್ನನ್ನು ಸನ್ಮಾನಿಸಿ ಹೆಗಲ ಮೇಲೆ ದೊಡ್ಡ ಜವಾಬ್ದಾರಿ ಹೊರಿಸಿದ್ದೀರ. ಹುದ್ದೆಗೆ ಕಳಂಕ ಬರದಂತೆ ನಿಭಾಯಿಸುತ್ತೇನೆಂದು ಕರ್ನಾಟಕ ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಡಾ.ಕೆ.ಅನ್ವರ್‌ಭಾಷ ವಾಗ್ದಾನ ಮಾಡಿದರು.

ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿಯಲ್ಲಿ ಶುಕ್ರವಾರ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು ಸೈಫುದ್ದಿನ್ ಕೂಡ ಈ ಹುದ್ದೆಯಲ್ಲಿದ್ದರು. ಆಗ ರಾಜ್ಯದ ಮುಖ್ಯಮಂತ್ರಿಯಾಗಿದ್ದವರು ವಕ್ಫ್ ಮಂಡಳಿಗೆ ಅಧ್ಯಕ್ಷರನ್ನು ನಾಮಿನೇಟ್ ಮಾಡುತ್ತಿದ್ದರು. ಈಗ ನಡೆದ ಚುನಾವಣೆಯಲ್ಲಿ ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ನಿಸ್ಪಕ್ಷಪಾತವಾಗಿ ಕೆಲಸ ಮಾಡುತ್ತೇನೆ. ಸನ್ಮಾನ ಮಾಡಿಸಿಕೊಳ್ಳುವುದು ಸುಲಭ. ಅದರ ಹಿಂದೆ ಜವಾಬ್ದಾರಿಯಿದೆ. ರೈಲ್ವೆ ಮಂತ್ರಿಯಾಗಿದ್ದ ಸಿ.ಕೆ.ಜಾಫರ್‌ಷರೀಫ್ ಪ್ರಥಮವಾಗಿ ಚಿತ್ರದುರ್ಗ ಜಿಲ್ಲಾ ಸಲಹಾ ಸಮಿತಿ ಸದಸ್ಯನಾಗಿ ನೇಮಕ ಮಾಡಿದ್ದರು ಎನ್ನುವುದನ್ನು ಸ್ಮರಿಸಿದರು.




ಡಿ.ಸಿ.ಸಿ. ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್‌ವುಲ್ಲಾ ಶರೀಫ್ ಮಾತನಾಡಿ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಸದಸ್ಯರಾಗಿರುವ ಡಾ.ಕೆ.ಅನ್ವರ್‌ಭಾಷ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವುದು ನಿಜವಾಗಿಯೂ ಚಿತ್ರದುರ್ಗ ಜಿಲ್ಲೆಗೆ ಸಂದ ಕೀರ್ತಿ. ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಅಭಿವೃದ್ದಿಯತ್ತ ಸಾಗುತ್ತಿದೆ. ಇದರ ಹಿಂದೆ ಸೊಸೈಟಿ ಅಧ್ಯಕ್ಷ ಎಂ.ನಿಶಾನಿ ಜಯಣ್ಣನವರ ಪರಿಶ್ರಮವಿದೆ ಎಂದು ಗುಣಗಾನ ಮಾಡಿದರು.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾಗಿರುವಡಾ.ಕೆ.ಅನ್ವರ್‌ಭಾಷರವರು ಅಲ್ಪಸಂಖ್ಯಾತರನ್ನು ಶೈಕ್ಷಣಿಕ, ಸಾಮಾಜಿಕ, ರಾಜಕೀಯವಾಗಿ ಮುಂಚೂಣಿಗೆ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಶುಭ ಹಾರೈಸಿದರು.

ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ನಿಶಾನಿ ಜಯಣ್ಣ ಸನ್ಮಾನಿಸಿ ಮಾತನಾಡುತ್ತ ಡಾ.ಕೆ. ಅನ್ವರ್‌ಭಾಷ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾಗಿರುವುದು ನಮಗೆಲ್ಲಾ ಸಂತೋಷವಾಗಿದೆ. ಡಿ.ಸಿ.ಸಿ. ಬ್ಯಾಂಕ್ 1200 ಕೋಟಿ ರೂ.ಗಳ ವಹಿವಾಟು ನಡೆಸಿ ಭಾರತದಲ್ಲಿಯೇ ಎರಡನೆ ಸ್ಥಾನದಲ್ಲಿದೆ. ಹದಿನೆಂಟು ವರ್ಷಗಳಿಂದ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷನಾಗಿ ನಾನು 600 ಮಂದಿ ಅಲ್ಪಸಂಖ್ಯಾತರಿಗೆ ಸದಸ್ಯತ್ವ ನೀಡಿದ್ದೇನೆ. ಎರಡು ಕೋಟಿ ರೂ. ಬಿಲ್ಡಿಂಗ್ ಕಟ್ಟಿಸಿದ್ದೇನೆ. ಹಾಗಾಗಿ ಇನ್ನು ಹೆಚ್ಚಿನ ಅಭಿವೃದ್ದಿಯಾಗಬೇಕಾಗಿರುವುದರಿಂದ ಅಲ್ಪಸಂಖ್ಯಾತರ ಇಲಾಖೆ ಮೂಲಕ ಸೊಸೈಟಿಗೆ ಕಡಿಮೆ ಬಡ್ಡಿ ದರದಲ್ಲಿ ಅನುದಾನ ಬಿಡುಗಡೆಗೊಳಿಸುವಂತೆ ಮನವಿ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಶತಮಾನ ಪೂರೈಸಿರುವುದು ಹೆಮ್ಮೆಯ ಸಂಗತಿ. ಇಲ್ಲಿ ಎಲ್ಲಾ ಜಾತಿ ಧರ್ಮದ ಸದಸ್ಯರುಗಳಿದ್ದಾರೆ. ಪೂರ್ವಜರು ಆರಂಭಿಸಿರುವ ಸೊಸೈಟಿಗೆ ಕೇಂದ್ರದ ರೈಲ್ವೆ ಮಂತ್ರಿಯಾಗಿದ್ದವರು ಹಾಗೂ ರಾಜ್ಯದ ಮುಖ್ಯಮಂತ್ರಿಯಾಗಿದ್ದವರು ಸದಸ್ಯರಾಗಿದ್ದರು ಎನ್ನುವುದೆ ಹೆಗ್ಗಳಿಕೆ. ಅಲ್ಪಸಂಖ್ಯಾತರ ಇಲಾಖೆಯಿಂದ ಏನೆಲ್ಲಾ ಸೌಲಭ್ಯಗಳಿವೆಯೋ ಅವನ್ನೆಲ್ಲಾ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿಗೆ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರಾಜ್ಯಾಧ್ಯಕ್ಷ ಡಾ.ಕೆ. ಅನ್ವರ್‌ಭಾಷರವರಲ್ಲಿ ವಿನಂತಿಸಿದರು.

ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಎಂ.ಸಿ.ಓ. ಬಾಬು, ತಾಲ್ಲೂಕು ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಲ್ಲೇಶಪ್ಪ ವೇದಿಕೆಯಲ್ಲಿದ್ದರು. ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಕಾರ್ಯದರ್ಶಿ ಮಹಮದ್ ನಯೀಂ, ಡಿ.ಎನ್.ಮೈಲಾರಪ್ಪ, ಹೆಚ್.ಸಿ. ನಿರಂಜನಮೂರ್ತಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಸೆ.30 ರವರೆಗೆ ಬೆಳಿಗ್ಗೆ 8 ರಿಂದ ರಾತ್ರಿ 8 ರವರೆಗೆ ಉಪನೋಂದಣಾಧಿಕಾರಿ ಕಚೇರಿ ಕಾರ್ಯನಿರ್ವಹಣೆ

» ಚಿತ್ರದುರ್ಗ

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕೇಂದ್ರ ಮೌಲ್ಯ ಮಾಪನ ಸಮಿತಿಯ 2023-24ನೇ ಸಾಲಿನಲ್ಲಿ ಸ್ಥಿರಾಸ್ತಿಗಳ ಮಾರುಕಟ್ಟೆ ಮೌಲ್ಯ ಮಾರ್ಗಸೂಚ ದರಗಳನ್ನು ಪರಿಷ್ಕರಣೆ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ನೋಂದಣಿಗೆ ಹಾಜರುಪಡಿಸುವ ದಸ್ತಾವೇಜುಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆಗಳು ಇರುತ್ತವೆ, ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಉಪನೋಂದಣಿ ಕಛೇರಿಗಳ ಕೆಲಸದ ಅವಧಿಯನ್ನು ಸೆ.23 ರಿಂದ ಜಾರಿಗೆ ಬರುವಂತೆ ಬೆಳಿಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ಕಾರ್ಯ ನಿರ್ವಹಿಸಲು ಕಛೇರಿ ಅವಧಿಯನ್ನು ವಿಸ್ತರಿಸಿ ಆದೇಶಿಸಲಾಗಿದೆ.

### ವಿಶ್ವ ಪ್ರವಾಸೋದ್ಯಮ ದಿನಾಚರಣೆ ಪ್ರಯುಕ್ತ ಕಾರ್ಯಾಗಾರ

» ದಾವಣಗೆರೆ

ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ 27 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಎಸ್.ಎಸ್ ಕನ್ವೆಂಷನ್ ಸೆಂಟರ್‌ನ ಪಾರ್ವತಿ ಪಾರ್ಲ್ ಮಿನಿ ಹಾಲ್‌ನಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರು ಇವರ ಅಧ್ಯಕ್ಷತೆಯಲ್ಲಿ 2020-26 ನೇ ಪ್ರವಾಸೋದ್ಯಮ ನೀತಿಯಲ್ಲಿ ಲಭ್ಯವಿರುವ ಇಲಾಖೆಯ ಯೋಜನೆಗಳ ಕುರಿತು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರವನ್ನು ಟೂರಿಜಮ್ ಅಂಡ್ ಗ್ರೀನ್ ಇನ್ವೆಸ್ಟ್‌ಮೆಂಟ್ ಎಂಬ ಸಂದೇಶದೊಂದಿಗೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಯೋಗದೊಂದಿಗೆ, ಪ್ರವಾಸೋದ್ಯಮ ಇಲಾಖೆಯಲ್ಲಿ ತೊಡಗಿರುವ ಭಾಗಿದಾರರ ಹಾಗೂ ಹೂಡಿಕೆದಾರರ ಸಹಭಾಗಿತ್ವದಲ್ಲಿ ಆಚರಿಸಲಾಗುತ್ತಿದೆ.ಆಸಕ್ತ ಸ್ಟೇಕ್ ಹೋಲ್ಡರ್‌ಗಳುಜಿಲ್ಲಾಪ್ರವಾಸೋದ್ಯಮಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ. 08192-230123 ಗೆ ಸಂಪರ್ಕಿಸಲು ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಮಾದರಿಗಳಿಗೆ ಆಹ್ವಾನ

» ದಾವಣಗೆರೆ

ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿ50ವರ್ಷಪೂರ್ಣಗೊಳ್ಳಲಿರುವಅಂಗವಾಗಿ ಕರ್ನಾಟಕ ಸಂಭ್ರಮ 50, ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಶೀರ್ಷಿಕೆಯಡಿ ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಛನ(ಲೋಗೋ) ಮಾದರಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆಯಾದ ಮಾದರಿ ಲಾಂಛನಕ್ಕೆ 25,000 ಗಳ ನಗದು ಬಹುಮಾನವನ್ನು ನಿಗದಿಪಡಿಸಲಾಗಿದೆ. ಆಸಕ್ತರು ತಮ್ಮ ಕಲ್ಪನೆಯಲ್ಲಿ ಮೂಡಿಬಂದ ಲಾಂಛನದ ಮಾದರಿಯನ್ನು ಸೆಪ್ಟೆಂಬರ್ 30 ರೊಳಗಾಗಿ ಕಳುಹಿಸಲು ಅವಕಾಶವಿದ್ದು, ಈ ಕುರಿತು ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ https://kannadasiri.karnataka.gov.in ಸಂಪರ್ಕಿಸಬಹುದಾಗಿದೆ.

### ಸೆ.26ರಂದು ಹಿರಿಯ ನಾಗರಿಕರಿಗೆ ಕಾನೂನು ಅರಿವು-ನೆರವು ಹಾಗೂ ಆರೋಗ್ಯ ತಪಾಸಣಾ ಶಿಬಿರ

» ಚಿತ್ರದುರ್ಗ

ಜಿಲ್ಲಾಮಟ್ಟದಲ್ಲಿ ಅಕ್ಟೋಬರ್ 1ರಂದು ಹಮ್ಮಿಕೊಂಡಿರುವ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಇದೇ ಸೆಪ್ಟೆಂಬರ್ 26ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ಬುದ್ಧ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಜಿಲ್ಲೆಯ ಹಿರಿಯ ನಾಗರಿಕರಿಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರ'ದ'ಲ್ಲಿ ಕೀಲು-ಮೂಳೆ ತಜ್ಞರು, ಕಿವಿ, ಮೂಗು-ಗಂಟಲು ತಜ್ಞರು, ಕಣ್ಣಿನ ತಜ್ಞರು, ಫಿಜಿಶಿಯನ್, ವೈದ್ಯಾಧಿಕಾರಿ (ಸೈಕ್ಯಾಟ್ರಿಸ್ಟ್), ಸೈಕಾಲಾಜಿಸ್ಟ್, ಆಡಿಯೋಮೆಟ್ರಿಸ್ಟ್, ನೇತ್ರಾಧಿಕಾರಿಗಳು ಹಾಗೂ ಹೃದಯರೋಗ ತಜ್ಞರು ಭಾಗವಹಿಸಲಿದ್ದು, ಶಿಬಿರದ ಸದುಪಯೋಗವನ್ನು ಹಿರಿಯ ನಾಗರಿಕರು ಪಡೆದುಕೊಳ್ಳಲು ಈ ಮೂಲಕ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ. ದೂರವಾಣಿ ಸಂ 08194-235284 ಗೆ ಸಂಪರ್ಕಿಸಬಹುದು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T